ಸಂಪುಟ : 9 ಸಂಚಿಕೆ 141 ಪುಟ : 4 ಬೆಲೆ: 3.00 ಮಂಗಳವಾರ ಜುಲೈ 9 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 141 Pages : 4 Price : 3.00 Tuesday July 9 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಇಂದಿನ ನೀರು ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಜುಲೈ 9ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 ವಿಜಯನಗರ ಶಾಲೆಯ ಭಾಗಗಳು, ಕರುಗಲ್ ಲೇಔಟ್, ವಾಲ್ಮೀಕಿ ಭವನ, ಕಮತರ ಪ್ಲಾಟ್, ಹನುಮಂತ ದೇವರ ಗುಡಿ ಲೈನ್, ಗಾರ್ಡನ್ ಸುತ್ತಮುತ್ತಲಿನ ಭಾಗಗಳು. ವಾರ್ಡ್ ನಂ. 33 ಮುಳಗುಂದ ರೋಡ್ ಕೇಶವ ನಗರ, ಜಯಶ್ರೀ ಲೈನ್, ಗಾಯಕವಾಡ ಲೈನ್, ಪಂಚಮುಖಿ ದೇವಸ್ಥಾನದ ಬ್ಯಾಂಕರ್ಸ್ ಕಾಲೋನಿ, ವೀರೇಶ್ವರ ನಗರ, ಝಕೀರ್ ಹುಸೇನ್ ಕಾಲೋನಿ, ಹುಬ್ಬಳ್ಳಿ ರೋಡ್.

ವಾರ್ಡ್ ನಂ. 34, 35 ರಾಮನಗರ, ಸೇವಾಲಾಲ್ ನಗರ, ಬಾಪೂಜಿನಗರ, ಆದರ್ಶ ನಗರ 9 ನಂಬರ್ ಶಾಲೆ, ನೀಲಮ್ಮ ತಾಯಿ ಮಠದ ಲೈನ್, ಬಿದರೂರ ಲೈನ್, ದೇಸಾಯಿ ಹಾಸ್ಟೆಲ್, ವಡ್ಡರಗೇರಿ ಈಶ್ವರ ಗುಡಿ ಲೈನ್, ಶಿವಾನಂದ ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 13, 14 ಟ್ಯಾಗೋರ ರೋಡ್, ಹಣಗಿ ಜೀನ 2 ಭಾಗ, ಕುರುಡಗಿ 2 ಭಾಗ, ಜನತಾ ಗೋಡೌನ್ ಲೈನ್, ಕೊನ್ನೂರ ಲೈನ್, ಮಣಿಕಂಠ ಲೈನ್, ಬಿಕೆ ಮಾಸ್ತರ್ ಲೈನ್, ಹೊಸಮನಿಯವರ ಲೈನ್, ತಟ್ಟಿಮನಿಯವರ ಲೈನ್, ತೋರಗಲ್ಲ ಲೈನ್, ಹಾದಿಮನಿ ಲೈನ್.

ವಾರ್ಡ್ ನಂ. 12, 13 ಆನಂದ ಕಾರ್ಕಳ ಲೈನ್, ಡಂಬಳದವರ ಲೈನ್, ಟೋಪಿಯವರ ಲೈನ್, ಅಗಸರ ಲೈನ್, ಜಾದವರ ಲೈನ್, ಶಿವನಗುತ್ತಿಯವರ ಲೈನ್, ಅಂಗಡಿಯವರ, ಗುರಿಕಾರ ಲೈನ್, ಗಣಪತಿ ಗುಡಿ ಹಿಂದಿನ ಭಾಗ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಳಗುಂದ: ಆಸ್ತಿ ಮಾಲೀಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಪಟ್ಟಣ ಪಂಚಾಯತ್ ಮುಳಗುಂದ ವ್ಯಾಪ್ತಿಯಲ್ಲಿ ಬರುವ ಆಸ್ತಿ ಮಾಲೀಕರು ಮತ್ತು ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, 2024–25ನೇ ಸಾಲಿನ ಆಸ್ತಿ ತೆರಿಗೆಯನ್ನು ಕರ್ನಾಟಕ ಪೌರಸಭೆಗಳ ಅಧಿನಿಯಮದನ್ವಯ ರಾಜ್ಯದ ನಗರ, ಸ್ಥಳೀಯ ಸಂಸ್ಥೆಗಳಲ್ಲಿ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳು) ಆರ್ಥಿಕ ವರ್ಷದ ಆರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದಲ್ಲಿ ಶೇ.5%ರಷ್ಟು ರಿಯಾಯಿತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅವಕಾಶದ ಅವಧಿಯನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ.

ಸಾರ್ವಜನಿಕರು ಆಸ್ತಿ ತೆರಿಗೆಯನ್ನು ಪಾವತಿ ಮಾಡಿ ಶೇ.5%ರಷ್ಟು ರಿಯಾಯಿತಿಯನ್ನು ಸದುಪಯೋಗ ಪಡೆದುಕೊಳ್ಳಬೇಕು. ಇದರೊಂದಿಗೆ ನೀರಿನ ಕರ, ಉದ್ದಿಮೆ ಪರವಾನಿಗೆ, ಜಾಹೀರಾತು ಶುಲ್ಕ ಹಾಗೂ ವಾಣಿಜ್ಯ ಮಳಿಗೆಯ ಬಾಡಿಗೆಯನ್ನು ಸಕಾಲದಲ್ಲಿ ಪಾವತಿಸಿ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಸ್ಲಂ ಬೋರ್ಡ್‌ನ ಭ್ರಷ್ಟ ಅಧಿಕಾರಿ, ಸಿಬ್ಬಂದಿಗಳ ಅಮಾನತಿಗೆ ಆಗ್ರಹಿಸಿ ಸ್ಲಂ ನಿವಾಸಿಗಳಿಂದ ಪ್ರತಿಭಟನೆ

ಉನ್ನತ ಮಟ್ಟದ ತನಿಖೆಗೆ ಆದೇಶಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸ್ಲಂ ಪ್ರದೇಶಗಳಲ್ಲಿ ನಿರ್ಮಿಸಲಾಗುತ್ತಿರುವ ಪ್ರಧಾನಮಂತ್ರಿ ಆವಾಸ್ ಯೋಜನೆಯ ಮನೆಗಳು ಕಳಪೆಯಾಗಿದೆ ಹಾಗೂ ವಸತಿ ಯೋಜನೆಯ ಅನುದಾನದಲ್ಲಿ ಭಾರೀ ಭ್ರಷ್ಟಾಚಾರ ನಡೆಸಿರುವ ಸ್ಲಂ ಬೋರ್ಡ್ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಕೂಡಲೇ ಅಮಾನತು ಮಾಡಬೇಕೆಂದು ಆಗ್ರಹಿಸಿ ಸ್ಲಂ ಜನಾಂದೋಲನ–ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಟಿಪ್ಪು ಸುಲ್ತಾನ ಸರ್ಕಲ್‌ನಿಂದ ಬೃಹತ್ ರ್‍ಯಾಲಿಯನ್ನು ನಡೆಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಸ್ಲಂ ಜನಾಂದೋಲನ–ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಜಿಲ್ಲಾಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಪ್ರಧಾನಮಂತ್ರಿಗಳ ಆವಾಸ್ ಯೋಜನೆಡಿಯಲ್ಲಿ ಗದಗ–ಬೆಟಗೇರಿ ನಗರದಲ್ಲಿ 863 ಮನೆಗಳನ್ನು ಹಾಗೂ ಗದಗ ಜಿಲ್ಲೆಯ ವಿವಿಧ ತಾಲೂಕು ಕೇಂದ್ರಗಳಲ್ಲಿ ನೂರಾರು ಮನೆಗಳನ್ನು ನಿರ್ಮಿಸಲಾಗುತ್ತಿದೆ. ಈ ಕಾಮಾಗಾರಿಯ ಅನುದಾನದಲ್ಲಿ ಸ್ಲಂ ಬೋರ್ಡ್ ಅಧಿಕಾರಿಗಳು, ಕೆಲ ಸಿಬ್ಬಂದಿಗಳು ಮತ್ತು ಗುತ್ತಿಗೆದಾರರು ಸೇರಿ ಭಾರಿ ಭ್ರಷ್ಟಾಚಾರವನ್ನು ನಡೆಸಿದ್ದಾರೆ

ಈವರೆಗೊ ಜಿಲ್ಲಾಡಳಿತದಿಂದ ಇಂತಹ ಭ್ರಷ್ಟ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದೇ ಇರುವುದನ್ನು ನಾವು ಖಂಡಿಸುತ್ತೇವೆ. ಗದಗ–ಬೆಟಗೇರಿ ನಗರದ ಅನೇಕ ಅಘೋಷಿತ ಗುಡಿಸಲು ಪ್ರದೇಶಗಳನ್ನು ಘೋಷಣೆಗಾಗಿ ಸ್ಥಳೀಯ ನಿವಾಸಿಗಳ ಎಲ್ಲಾ ದಾಖಲೆಗಳೊಂದಿಗೆ ಹಾಗೂ ನಗರಸಭೆಯಿಂದ ನೀಡಲಾಗಿರುವ ಠರಾವು ಪ್ರತಿ ಮತ್ತು ನಿರಾಕ್ಷೇಪಣಾ ಪತ್ರದೊಂದಿಗೆ ಅರ್ಜಿಗಳನ್ನು ಸಲ್ಲಿಸಿ 3 ವರ್ಷಗಳಾದರೂ ಸಹ ಈವರೆಗೊ ಸ್ಲಂ ಘೋಷಣೆ ಕುರಿತು ಸ್ಲಂ ಬೋರ್ಡ್‌ನಿಂದ ಅಗತ್ಯ ಕ್ರಮ ಕೈಗೊಳ್ಳದೇ ಸ್ಲಂ ಜನರ ವಿರೋಧಿ ನೀತಿಯನ್ನು ಅನುಸರಿಸಲಾಗುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಎಂದು ಆರೋಪಿಸಿದರು. ಈ ಹೋರಾಟವನ್ನು ಜಿಲ್ಲಾಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಸ್ಲಂ ಜನರ ವಿರೋಧಿ ಹಾಗೂ ಭ್ರಷ್ಟ ಅಧಿಕಾರಿಗಳನ್ನು ಅಮಾನತು ಮಾಡಿ ಆದೇಶ ಹೊರಡಿಸಬೇಕು.ಈ ಬಗ್ಗೆ ಉನ್ನತ ಮಟ್ಟದ ತನಿಖೆಗೆ ಆದೇಶಿಸಬೇಕು. ಇಲ್ಲವಾದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಅನಿರ್ಧಿಷ್ಟ ಧರಣಿ ಸತ್ಯಾಗ್ರಹ ನಡೆಸಲಾಗುವುದೆಂದು ಮನವಿಯ ಮೂಲಕ ಎಚ್ಚರಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿಯ ಪದಾಧಿಕಾರಿಗಳಾದ ರವಿಕುಮಾರ ಬೆಳಮಕರ, ಅಶೋಕ ಕುಸಬಿ, ದುರ್ಗಪ್ಪ ನವಲಗುಂದ, ಮೆಹರುನಿಸಾ ಢಾಲಾಯತ, ಶಂಕ್ರಪ್ಪ ರೋಣ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಮಕ್ತುಮ ಮುಲ್ಲಾನವರ, ಇಬ್ರಾಹಿಂ ಮುಲ್ಲಾ, ಮಲೇಶಪ್ಪ ಕಲಾಲ, ಪ್ರಕಾಶ ಹಡಗಲಿ, ಮೌಲಾಸಾಬ ಗಚ್ಚಿ, ಗೌಸಸಾಬ ಅಕ್ಕಿ, ಮೆಹಬೂಸಾಬ ಬಳ್ಳಾರಿ, ರೇವಣಪ್ಪ ಲಕ್ಕುಂಡಿ, ಖಾಜಾಸಾಬ ಬಳ್ಳಾರಿ, ನಜಮುನಿಸಾ ಮುರಗೋಡ, ಸಾಕ್ರುಬಾಯಿ ಗೋಸಾವಿ, ದಾದು ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ದುರ್ಗಪ್ಪ ಮಣ್ಣವಡ್ಡರ, ರವಿ ಗೋಸಾವಿ, ಮಂಜುನಾಥ ಶ್ರೀಗಿರಿ, ಶಿವಾನಂದ ಶಿಗ್ಲಿ, ಸಲೀಮ ಬೈರಕದಾರ, ದಾವಲ ಯಾದಗೇರಿ, ಮಮ್ತಾಜ ಕರಮುಡಿ ಸೇರಿದಂತೆ ನೂರಾರು ಸ್ಲಂ ನಿವಾಸಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಿದ್ದಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ವಿವಿಧ ಕಾಮಗಾರಿಗಳ ಭೂಮಿಪೂಜೆ

ಹೊರಟ್ಟಿಯವರ ಜನಪರ ಸೇವೆ ಸ್ಮರಣೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ನಾಲ್ಕು ದಶಕಗಳಿಂದ ಸಾರ್ವಜನಿಕ ಜೀವನದಲ್ಲಿದ್ದ ಸಭಾಪತಿ ಬಸವರಾಜ ಹೊರಟ್ಟಿಯವರು ನಾಡಿಗೆ ಸಾಕಷ್ಟು ಜನಪರ ಸೇವೆಯನ್ನು ಸಲ್ಲಿಸಿದ್ದಾರೆ. ವಿಶೇಷವಾಗಿ ಗದಗ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಯನ್ನು ನೀಡುವ ಮೂಲಕ ಪ್ರದೇಶಾಭಿವೃದ್ಧಿ ಅನುದಾನವನ್ನು ನೀಡಿದ್ದಾರೆ. ಹೀಗಾಗಿ ಅವರ ಸೇವೆಯನ್ನು ಗದಗ ಜನತೆ ಸದಾ ಸ್ಮರಿಸುತ್ತಾರೆ ಎಂದು ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ ಹೇಳಿದರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಇಲ್ಲಿನ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ನಗರಸಭೆಯ ಅನುದಾನದ ಅಡಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಹೈಮಾಸ್ಟ್ ಲೈಟ್ ಮತ್ತು ಪೇವರ್ಸ್ ಜೋಡಣೆ ಕಾಮಗಾರಿಯ ಭೂಮಿಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು

ಮಾತನಾಡಿದರು.

ಈ ಸಂದರ್ಭದಲ್ಲಿ ಹಿರಿಯರಾದ ತೋಟೋಸಾ ಬಾಂಡಗೆ, ಎಮ್.ಆರ್. ರಾಜೋಳಿ, ಪಿ.ಆರ್. ಇನಾಮದಾರ, ಆರ್.ಎಂ. ಕುಬೇರ, ನಿವೃತ್ತ ಮುಖ್ಯೋಪಾಧ್ಯಾಯ ಎಸ್. ಎಂ. ಅಗಡಿ, ಅಮರನಾಥ ಗಡಗಿ, ರವಿ ನರೇಗಲ್ಲ, ವಂದನಾ ವರ್ಣೇಕರ್, ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ, ಶಂಕ್ರಮ್ಮ ಆರ್. ಹಣಮಗೌಡ್ರು, ಸಂಜೀವಿನಿ ಜಿ.ಕೂಲಗುಡಿ, ಎಂ.ಐ. ಶಿವನಗೌಡರ, ಮಂಜುಳಾ ಪಿ.ಸಾಮ್ರಾಣಿ, ಶಶಿಕಲಾ ಬಿ.ಗುಳೇದವರ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್. ಗಾಳಿ, ಶಾರದಾ ಎ.ಬಾಣದ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್. ಆರ್. ಶಿರೋಳ್, ಸಬಿಯಾ ಯು. ಕುಷ್ಟಗಿ, ಗಂಗಾ ಎಂ.ಅಳವಂಡಿ, ಪದ್ಮಾ ವಿ.ದಾಸರ್, ಗುತ್ತಿಗೆದಾರ ವಾಸಿಂ ಕುನ್ನಿಭಾವಿ, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು.

ಡಾ.ಬಸವರಾಜ ಧಾರವಾಡ ಮಾತನಾಡಿ, ಈ ಶಾಲೆಯಲ್ಲಿದ್ದ ಎಲ್ಲ ಕೊರತೆಗಳನ್ನು ನೀಗಿಸಿ ಒಂದು ಮಾದರಿ ಶಾಲೆಯನ್ನಾಗಿ ನಿರ್ಮಿಸುವಲ್ಲಿ ಬಸವರಾಜ ಹೊರಟ್ಟಿಯವರ ಸಹಕಾರದ ಜೊತೆಗೆ ವಿವಿಧ ಜನಪ್ರತಿನಿಧಿಗಳು, ದಾನಿಗಳು, ಜಿಲ್ಲಾಡಳಿತ, ನಗರಸಭೆಯವರು ಕೈಜೋಡಿಸಿದ್ದಾರೆ. ಅವರ ಸೇವೆಯನ್ನು ಎಂದೂ ಯಾರೂ ಮರೆಯಲಾಗದು. ಈ ಶಾಲೆ ಮುಂಬರುವ ದಿನಗಳಲ್ಲಿ ರಾಜ್ಯದಲ್ಲಿಯೇ ಒಂದು ಮಾದರಿ ಶಾಲೆಯಾಗಿ ನಿರ್ಮಾಣಗೊಳ್ಳುವಲ್ಲಿ ಯಾವುದೇ ಸಂಶಯವಿಲ್ಲ. ಈ ಶಾಲೆ ಅಭಿವೃದ್ಧಿಗೆ ವಿಶೇಷವಾಗಿ ಕೈಜೋಡಿಸಿದ ಹಿಂದಿನ ಜಿಲ್ಲಾಧಿಕಾರಿಗಳಾದ ವೈಶಾಲಿ ಎಂ.ಎಲ್. ಅವರ ಸೇವೆಯನ್ನು ಮರೆಯಲು ಸಾಧ್ಯವೇ ಇಲ್ಲ ಎಂದರು.

ಡೆಂಘೀ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಅವಶ್ಯ: ಶಾಸಕ ಜಿ.ಎಸ್. ಪಾಟೀಲ

ಸ್ವಚ್ಛತೆಗೆ ಆದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯದಲ್ಲಿ ಆತಂಕ ಮೂಡಿಸಿರುವ ಡೆಂಘೀ ನಿಯಂತ್ರಣಕ್ಕೆ ವೈದ್ಯರು ಹಾಗೂ ಅಧಿಕಾರಿಗಳು ಮೊದಲ ಆದ್ಯತೆಯನ್ನು ನೀಡಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ಸಲ್ಲದು ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ರವಿವಾರ ಸಂಜೆ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡು ಪುರಸಭೆಯ ಅಧಿಕಾರಿಗಳೂ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದರು.

ನಮ್ಮ ತಾಲೂಕಿನಲ್ಲಿ ಡೆಂಘೀ ಜ್ವರ ಹೆಚ್ಚಿನ ಪ್ರಮಾಣದಲ್ಲಿ ಇಲ್ಲ ಎಂಬ ಮನೋಭಾವನೆ ಸರಿಯಲ್ಲ. ಆರೋಗ್ಯ ಇಲಾಖೆಯೊಂದಿಗೆ ಇತರೆ ಇಲಾಖೆಗಳು ಸಹ ಕೈಜೋಡಿಸುವ ಮೂಲಕ ಜನರಲ್ಲಿ ಜಾಗೃತಿಯನ್ನು ಮೂಡಿಸಬೇಕು. ವಿಶೇಷವಾಗಿ ಶಹರ ಹಾಗೂ ಗ್ರಾಮೀಣ ಭಾಗಗಳ



ಶಹರ ಪ್ರದೇಶಗಳಲ್ಲಿ ಪುರಸಭೆ ಮತ್ತು ಗ್ರಾಮೀಣ ಭಾಗಗಳಲ್ಲಿ ಗ್ರಾ.ಪಂಗಳು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸಬೇಕು. ಸಾರ್ವಜನಿಕರಿಗೆ ಡೆಂಘೀ ಜ್ವರದ ಬಗ್ಗೆ ತಿಳುವಳಿಕೆಯನ್ನು ನೀಡುವ ಜೊತೆಗೆ ಆರೋಗ್ಯ ತಪಾಸಣೆ ನಡೆಸಿ ಎಂದು ಸಲಹೆ ನೀಡಿದ ಅವರು, ನಾಗರಿಕ ಸಮುದಾಯ ಅಧಿಕಾರಿಗಳ ಜೊತೆಗೆ ಸ್ಪಂದಿಸಬೇಕು. ಅವರು ಜನರ ಸೇವೆಗಾಗಿ ಹಾಗೂ ಆರೋಗ್ಯದ ರಕ್ಷಣೆಗಾಗಿ ಬಂದಿದ್ದಾರೆ ಎನ್ನುವುದು ನಮಗೆ ಅರಿವಿರಬೇಕು ಎಂದರು.

ಸ್ವಚ್ಛತೆಗೆ ಮೊದಲ ಆದ್ಯತೆ ನಿಡಬೇಕು ಎಂದರು. ಈಗಾಗಲೇ ಈ ಕುರಿತು ಆರೋಗ್ಯ ಇಲಾಖೆಯ ಅಧಿಕಾರಿಗಳ ಜೊತೆಗೆ ಸಭೆ ನಡೆಸಲಾಗಿದೆ. ಸ್ಥಳೀಯ ಜನಪ್ರತಿನಿಧಿಗಳು ಕೂಡ ಜನರಲ್ಲಿ ಅರಿವು ಮೂಡಿಸಬೇಕು. ತಮ್ಮ ವಾರ್ಡ್‌ಗಳಲ್ಲಿ ನೀರು ನಿಲ್ಲದಂತೆ ಕ್ರಮವಹಿಸಬೇಕು. ನೀರನ್ನು ಶೇಖರಿಸುವ ಪಾತ್ರೆಗಳನ್ನು ಶುಚಿಗೊಳಿಸಬೇಕು. ಮಕ್ಕಳ ಬಗ್ಗೆ ಜಾಗ್ರತೆ ವಹಿಸಬೇಕು ಎಂದರು.

ರಂಗವ್ವ ಭಜಂತ್ರಿ, ಸಂಗನಗೌಡ ಪಾಟೀಲ, ಮುತ್ತಣ್ಣ ಸಂಗಳದ, ಯೂಸುಫ್ ಇಟಗಿ, ಸಂಗಪ ಜಿಡ್ಡಿಬಾಗಿಲ್, ದಾವಲಸಾಬ ಬಾಡಿನ, ಆನಂದ ಚಂಗಳಿ, ಸಂಗು ನವಲಗುಂದ, ಅಪ್ಪು ಗಿರಡ್ಡಿ, ಶಿವು ಹುಲ್ಲೂರ, ಮೌನೇಶ ಹಾದಿಮನಿ ಸೇರಿದಂತೆ ಅನೇಕರಿದ್ದರು.

ಕುಡಿಯುವ ನೀರು ಪೂರೈಕೆ ಕಾಮಗಾರಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

ಪ್ರತಿ ಮನೆಗೂ ಶುದ್ಧ ಕುಡಿಯುವ ನೀರು

■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ನಗರದ ಪ್ರತಿ ಮನೆಗೂ ಕೆವಲ 6 ತಿಂಗಳಲ್ಲಿ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಲಾಗುವುದು ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ರವಿವಾರ ಸಂಜೆ ಅಮೃತ 2.0 ಯೋಜನೆಯಡಿ 20 ಕೋಟಿ 18 ಲಕ್ಷ ರೂಗಳ ವೆಚ್ಚದಲ್ಲಿ ಕುಡಿಯುವ ನೀರು ವಿತರಣಾ ಜಾಲ ಅಳವಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಈ ಹಿಂದೆ ರೋಣ ನಗರಕ್ಕೆ ಚೋಳಗುಡ್ಡದಿಂದ ನೀರು ಪೂರೈಕೆಯಾಗುತ್ತಿರುವ ಸಂದರ್ಭದಲ್ಲಿ ಸಾಕಷ್ಟು ಸಮಸ್ಯೆಗಳನ್ನು ಎದುರಿಸಿದ್ದೇವೆ. ನಂತರ ಜಿಗಳೂರ ಕೆರೆಗೆ ಹೆಚ್ಚುವರಿಯಾಗಿ 60 ಕೋಟಿ ರೂ ಅನುದಾನವನ್ನು ತರುವ ಮೂಲಕ ರೋಣ ಪಟ್ಟಣವನ್ನು

ಶಾಸಕ ಜಿ.ಎಸ್. ಪಾಟೀಲರು ವರ್ಷದ ಅವಧಿಯಲ್ಲಿ ಮತಕ್ಷೇತ್ರಕ್ಕೆ ಕೋಟ್ಯಾಂತರ ರೂಪಾಯಿಗಳ ಅನುದಾನವನ್ನು ತರುವ ಮೂಲಕ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ್ದು ಹೆಮ್ಮೆಯ ಸಂಗತಿಯಾಗಿದೆ.

– ವೆಂಕಣ್ಣ ಬಂಗಾರಿ.
ಪುರಸಭೆಯ ಮಾಜಿ ಅಧ್ಯಕ್ಷರು, ರೋಣ.

ಯೋಜನೆಗೆ ಸೇರಿಸಿ ಅಲ್ಲಿಂದ ನೀರು ಪೂರೈಕೆ ಮಾಡುವ ಕ್ರಮ ತೆಗೆದುಕೊಳ್ಳಲಾಯಿತು. ಈಗ ಮತ್ತೆ ನಿಮ್ಮ ಆಶೀರ್ವಾದಿಂದ ಶಾಸಕನಾಗಿದ್ದು, 20 ಕೋಟಿ 18 ಲಕ್ಷ ರೂಗಳ ವೆಚ್ಚದಲ್ಲಿ, ಮುಂದಿನ 6 ತಿಂಗಳುಗಳೊಳಗೆ ಪ್ರತಿ ಮನೆಗೆ ಕುಡಿಯುವ ನೀರು ಪೂರೈಸಲಾಗುವುದು ಎಂದರು.

ಮುಖ್ಯವಾಗಿ ರೋಣ ಪಟ್ಟಣದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಈಗಾಗಲೇ 20 ಕೋಟಿ ರೂ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಶೀಘ್ರವೇ ಕಾಮಗಾರಿ ಆರಂಭಿಸಲಾಗುವುದು. ಅಬ್ಬಿಗೇರಿ ರಸ್ತೆ, ಎಂಆರ್‌ಬಿಸಿ ಕಾಲುವೆಯಿಂದ ಮುದೇನಗುಡಿ ರಸ್ತೆಯವರೆಗೆ ಕಾಮಗಾರಿ ನಡೆಯಲಿದ್ದು, ಇದರಲ್ಲಿ ಪಾದಚಾರಿಗಳಿಗೆ ಪ್ರತ್ಯೇಕ ರಸ್ತೆಯನ್ನು ನಿರ್ಮಿಸಲಾಗುವುದ

ಸಂಪಾದಕೀಯ

ಸರ್ಕಾರಕ್ಕೆ ನೌಕರರ ಸವಾಲ್

ಕಾರ್ಯಾಂಗದ ಆಧಾರ ಸ್ತಂಭವಾಗಿರುವ ರಾಜ್ಯ ಸರ್ಕಾರಿ ನೌಕರರು, ವೇತನ ಹೆಚ್ಚಳ ವಿಷಯವಾಗಿ ರಾಜ್ಯ ಸರ್ಕಾರಕ್ಕೆ ಸವಾಲಾಗಿ ಪರಿಣಮಿಸಲಿದ್ದಾರೆ.

7ನೇ ವೇತನ ಆಯೋಗ ಜಾರಿ ವಿಷಯವಾಗಿ ರಾಜ್ಯ ಸರ್ಕಾರಿ ನೌಕರರು ಈಗ ಸಿಡಿದೆದ್ದಿದ್ದಾರೆ. ವೇತನ ಆಯೋಗ ಜಾರಿಯಾಗಿ ಎರಡು ವರ್ಷ ಕಳೆದರೂ ಆಯೋಗದ ಶಿಫಾರಸುಗಳು ಜಾರಿಯಾಗಿಲ್ಲ. ಇದರಿಂದ ಸರ್ಕಾರಿ ನೌಕರರು ಮತ್ತೊಮ್ಮೆ ಪ್ರತಿಭಟನೆಯ ಹಾದಿ ಹಿಡಿಯುವಂತಾಗಿದೆ.

ಕೆಲ ತಿಂಗಳ ಹಿಂದೆ ನಡೆದ ರಾಜ್ಯ ಸರ್ಕಾರಿ ನೌಕರರ ಸಮ್ಮೇಳನದಲ್ಲಿ, 7ನೇ ವೇತನ ಆಯೋಗದ ಶಿಫಾರಸುಗಳನ್ನು ಶೀಘ್ರವೇ ಜಾರಿಗೊಳಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಆದರೆ ಸದ್ಯ 7ನೇ ವೇತನ ಆಯೋಗದ ಶಿಫಾರಸು ಜಾರಿ ಮಾಡಲು ಸಾಧ್ಯವಿಲ್ಲ ಎನ್ನುವ ಅಭಿಪ್ರಾಯಕ್ಕೆ ಬಂದಿದ್ದಾರೆ. ಒಂದೊಮ್ಮೆ ಆಯೋಗದ ಶಿಫಾರಸು ಮಾಡಿದರೆ 18 ಸಾವಿರ ಕೋಟಿ ರೂ. ಹೊಂದಿಸಬೇಕಿದೆ.

ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಹೆಣಗಾಡುತ್ತಿರುವ ರಾಜ್ಯ ಸರಕಾರ, ಯಾವುದೇ ಕಾರಣಕ್ಕೂ ಸರಕಾರಿ ನೌಕರರ ಬೇಡಿಕೆ ಈಡೇರಿಸಲು ಸಾಧ್ಯವಿಲ್ಲ. ಆ ಕಾರಣಕ್ಕಾಗಿಯೇ ಸರಕಾರ ವೇತನ ಹೆಚ್ಚಳಕ್ಕೆ ಮುಂದಾಗುತ್ತಿಲ್ಲ. ಸದ್ಯ ವೇತನ ಹೆಚ್ಚಳ ಮಾಡಲು ಕಾಂಗ್ರೆಸ್ ಮುಂದೆ ಸದ್ಯ ಯಾವುದೇ ಚುನಾವಣೆಯೂ ಇಲ್ಲ. ರಾಜಕೀಯ ಲಾಭವಂತು ಸದ್ಯಕ್ಕೆ ಕಾಣುವುದಕ್ಕೆ ಸಾಧ್ಯವೂ ಇಲ್ಲ.

ಈ ಎಲ್ಲ ಕಾರಣಕ್ಕಾಗಿ ರಾಜ್ಯ ಸರಕಾರಿ ನೌಕರರು ಏನೇ ಪ್ರಯತ್ನ ಮಾಡಿದರೂ ಸದ್ಯಕ್ಕೆ ಆಯೋಗದ ಶಿಫಾರಸುಗಳನ್ನು ಸರಕಾರ ಒಪ್ಪಿಕೊಳ್ಳುವುದಿಲ್ಲ. ಹೋರಾಟ ಹತ್ತಿಕ್ಕುವ ಸರ್ವ ಪ್ರಯತ್ನಗಳನ್ನು ಮಾಡಿ, ಸದ್ಯಕ್ಕೆ ಒಂದೆರಡು ಬೇಡಿಕೆ ಈಡೇರಿಸಿ ನೌಕರರ ಮನವೊಲಿಸಿಕೊಳ್ಳುವುದು ನಿಶ್ಚಿತ.

ವಾರ್ಷಿಕ ಮಹಾಸಭೆ ಜರುಗಿಸುವುದು ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಬರುವ ಎಲ್ಲಾ ವಿಧದ ಸಹಕಾರ ಸಂಘ / ಸೌಹಾರ್ದ ಸಹಕಾರಿಗಳಿಗೆ ತಿಳಿಯಸುವುದೇನೆಂದರೆ 2023-24ನೇ ಸಾಲಿನ ಲೆಕ್ಕ ಪರಿಶೋಧನೆಯನ್ನು ಆಗಸ್ಟ್-31 ರೊಳಗಾಗಿ ಮಾಡಿಸಿಕೊಂಡು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆಯನ್ವಯ ಸೆಪ್ಟೆಂಬರ್ 25 ರೊಳಗಾಗಿ ವಾರ್ಷಿಕ ಮಹಾ ಸಭೆ ಜರುಗಿಸುವುದು ಕಡ್ಡಾಯವಾಗಿದೆ.

ಸಂಘದ ವಾರ್ಷಿಕ ಮಹಾಸಭೆಯಲ್ಲಿ 2023-24ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯ ನ್ಯೂನ್ಯತೆಗಳನ್ನು ನೋಟಿಸ್ ಮೂಲಕ ಸದಸ್ಯರಿಗೆ ತಿಳಿಸಿ ಅನುಮೋದಿಸತಕ್ಕದ್ದು ಹಾಗೂ ಅರ್ಹ ಸದಸ್ಯರಿಗೆ ವಾರ್ಷಿಕ ಮಹಾ ಸಭೆಯಲ್ಲಿ ಹಾಜರಾಗಲು ಅವಕಾಶ ನೀಡತಕ್ಕದ್ದು. ಇತ್ತೀಚಿನ ಸಹಕಾರ / ಸೌಹಾರ್ದ ಕಾಯ್ದೆ ಮತ್ತು ನಿಯಮಗಳಲ್ಲಿ ಆದಂತಹ ಎಲ್ಲಾ ತರಹದ ತಿದ್ದುಪಡಿಗಳನ್ನು ವಾರ್ಷಿಕ ಮಹಾ ಸಭೆಯ ನೋಟಿಸ್ ನಲ್ಲಿಟ್ಟು ಪೋಟ ನಿಯಮ ತಿದ್ದುಪಡಿಗೆ ಕ್ರಮವಿಡತಕ್ಕದ್ದು ಮತ್ತು ವಾರ್ಷಿಕ ಮಹಾಸಭೆಯನ್ನು ಜರುಗಿಸಿದ ಕುರಿತು ನೋಟಿಸ್ ಪ್ರತಿ, ಠರಾವು ಪ್ರತಿ ಮತ್ತು ಅಡಿಟ್ ವರದಿಯನ್ನು ಕಡ್ಡಾಯವಾಗಿ ಸಹಕಾರ ಸಂಘಗಳ ಉಪನಿಬಂಧಕರು, ಜಿಲ್ಲಾ ಆಡಳಿತ ಭವನ, ಕೊಠಡಿ ಸಂ-ಖ್ಯೆ-125 ಗದಗ ಜಿಲ್ಲೆ, ಗದಗ ಈ ಕಚೇರಿಗೆ ಸೆಪ್ಟೆಂಬರ್ 30 ರೊಳಗಾಗಿ ಎರಡು ಪ್ರತಿಗಳನ್ನು ಸಲ್ಲಿಸತಕ್ಕದ್ದು ತಪ್ಪಿದಲ್ಲಿ ನಿಯಮಾನುಸಾರ ಮುಂದಿನ ಕ್ರಮ ವಹಿಸಲಾಗುವುದು ಎಂದು ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮುದಾಯ ಭವನ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಸುಂಡಿ ಗ್ರಾಮದಲ್ಲಿ ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಿರ್ಮಿಸಿದ ಹಸಿರುಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಮ ಅವರ ಸಮುದಾಯ ಭವನವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ.ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ ಆರ್ ಪಾಟೀಲ, ಅಸುಂಡಿ ಗ್ರಾಮ ಪಂಚಾಯತಿ ಅಧ್ಯಕ್ಷ ಓಲೇಕಾರ, ಉಪಾಧ್ಯಕ್ಷ ಶಶಿಕಲಾ ಹೊಸಮನಿ, ಎಸ್. ಎನ್. ಬಳ್ಳಾರಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಸೇರಿದಂತೆ ಗ್ರಾಮದ ಗಣ್ಯರು ಹಾಜರಿದ್ದರು.

ಮಾಸ್ಕೋಗೆ ತೆರಳುವ ಪ್ರಧಾನಿಗೆ ಮಣಿಪುರ ಭೇಟಿಗೆ ಸಮಯವಿಲ್ಲ: ಕಾಂಗ್ರೆಸ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಳೆದ ವರ್ಷದ ಮೇ ತಿಂಗಳಿನಲ್ಲಿ ಜನಾಂಗೀಯ ಸಂಘರ್ಷ ಉಂಟಾದ ಬಳಿಕ ಟಟಿಖ. ಅಲ್ಲಿಗೆ ಹೋಗುವ ಆಸಕ್ತಿಯನ್ನೂ ಹೊಂದಿಲ್ಲ ಎಂದು ಕಾಂಗ್ರೆಸ್ ಹೇಳಿದೆ.

ಈ ಕುರಿತು ಎಕ್ಸ್‌ನಲ್ಲಿ ಬರೆದುಕೊಂಡಿರುವ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್, "ಇಂದು ಲೋಕಸಭೆಯ ವಿಪಕ್ಷ ನಾಯಕರು ಅಸ್ಸಾಂ ಹಾಗೂ ಮಣಿಪುರಕ್ಕೆ ಭೇಟಿ ಕೊಟ್ಟರೆ, ಜೈವಿಕವಾಗಿ ಜನಿಸಿಲ್ಲ ಎಂದು ಹೇಳಿಕೊಳ್ಳುವ ಪ್ರಧಾನಿ ಮಾಸ್ಕೋಗೆ ತೆರಳಿದ್ದಾರೆ. ಜೈವಿಕವಲ್ಲದ ಪ್ರಧಾನಿಯ ಹೊಗಳುಭಟ್ಟರು ಕೆಲ ಕಾಲ ರಷ್ಯಾ-ಉಕ್ರೇನ್ ಯುದ್ಧವನ್ನೇ ನಿಲ್ಲಿಸಿದರೆಂದು ಸಮರ್ಥಿಸಿಕೊಳ್ಳುತ್ತಾರೆ. ಬಹುಶಃ ಈ ಮಾಸ್ಕೋ ಪ್ರವಾಸ ಇನ್ನಷ್ಟು ವಿಲಕ್ಷಣವಾದ ಘಟನೆಗಳಿಗೆ ಕಾರಣವಾಗಬಹುದು" ಎಂದು ಪ್ರಧಾನಿಯನ್ನು ಕುಟುಕಿದ್ದಾರೆ.

ಅಂಧಕಾರ ತುಂಬಿ ತುಳುಕುವಲ್ಲಿಯೂ ತಾಯಿ ಜ್ಞಾನದ ಹಣತೆ ಹಚ್ಚಬಲ್ಲಳು

ತಾಯ್ತನದ ತಾಕತ್ತು; ಶಿಕ್ಷಕನ ಪತ್ರ

ಶಾಲೆಯಿಂದ ಓಡೋಡಿ ಬಂದ ಆ ಮಗು ತನ್ನ ತಾಯಿಯ ಕೈಯಲ್ಲಿ ಶಿಕ್ಷಕರು ನೀಡಿದ ಪತ್ರವನ್ನು ಕೊಟ್ಟನು. ಮಗನಿಗೆ ಕೈಕಾಲು ಮುಖ ತೊಳೆದುಕೊಳ್ಳಲು ಹೇಳಿದ ಆ ತಾಯಿ ಪತ್ರವನ್ನು ಓದಿ ಮುಗಿಸಿದಾಗ ಆಕೆಯ ಕಣ್ಣಲ್ಲಿ ನೀರು ತುಂಬಿತ್ತು. ಮಗುವಿನ ಶಿಕ್ಷಕಿ ನಿಮ್ಮ ಮಗುವಿನ ಬುದ್ಧಿ ಅತ್ಯಂತ ಮಂದವಾಗಿದ್ದು, ಆತನನ್ನು ಜಗತ್ತಿನ ಯಾವುದೇ ಶಾಲೆಯೂ ಸುಧಾರಿಸಲು ಸಾಧ್ಯವಿಲ್ಲ. ಆದ್ದರಿಂದ, ಇನ್ನು ಮುಂದೆ ಆತನನ್ನು ನಮ್ಮ ಶಾಲೆಯಲ್ಲಿ ಇಟ್ಟುಕೊಳ್ಳಲಾಗುವುದಿಲ್ಲ ಎಂದು ಬರೆದಿದ್ದು ಸಹಜವಾಗಿಯೇ ತಾಯಿಯ ಮನಸ್ಸಿಗೆ ನೋವಾಯಿತು.

ಮುಖ ತೊಳೆದು ಬಂದ ಮಗು ತಾಯಿಯನ್ನು 'ಅಮ್ಮ...ಏಕೆ ಹೀಗೆ ಅಳುತ್ತಿರುವೆ, ಶಿಕ್ಷಕರು ಏನೆಂದು ಬರೆದಿದ್ದಾರೆ?' ಎಂದು ಕೇಳಿದಾಗ ಆ ತಾಯಿ ತನ್ನ ಕಣ್ಣೀರನ್ನು ತೆ-ಗೆದು, 'ಏನೂ ಇಲ್ಲ ಕಂದ, ನಿನ್ನನ್ನು ಹೊಗಳಿ ನಿನ್ನ ಶಿಕ್ಷಕರು ಪತ್ರ ಬರೆದಿದ್ದಾರೆ. ನಿನಗೆ ಕಲಿಸುವಷ್ಟು ಜಾಣ್ಮೆ ಆ ಶಾಲೆಯಲ್ಲಿ ಯಾರಿಗೂ ಇಲ್ಲ. ಆದ್ದರಿಂದ ನಿನ್ನನ್ನು ಬೇರೊಂದು ಉತ್ತಮ ಶಾಲೆಗೆ ಕಳುಹಿಸು' ಎಂದು ಬರೆದಿದ್ದಾರೆ ಎಂದು ಹೇಳಿ, ಶೀಘ್ರವೇ ನಿನಗೊಂದು ಉತ್ತಮ ಶಾಲೆಯಲ್ಲಿ ದಾಖಲಾತಿ ಪಡೆಯೋಣ ಎಂದು ಹುರಿದುಂಬಿಸಿ ಮಗನಿಗೆ ತಿಂಡಿ ಕೊಟ್ಟು ಆಟಕ್ಕೆ ಕಳುಹಿಸಿದಳು.

ಮುಂದೆ ಬಾಲಕನ ತಾಯಿ ತನ್ನ

ಮಗನನ್ನು ದೂರದ ಬೇರೊಂದು ಶಹರಕ್ಕೆ ಕರೆದೊಯ್ದು ಆಕೆ ಆತನ ಶಿಕ್ಷಣ ಮತ್ತು ಸರ್ವತೋಮುಖ ಬೆಳವಣಿಗೆಯ ಕುರಿತು ಹೆಚ್ಚಿನ ಗಮನ ಹರಿಸಿ ಬೆಳೆಸಿದಳು. ತನ್ನಿಡೀ ಜೀವಿತವನ್ನು ಮಗನಿಗಾಗಿ ಮೀಸಲಿಟ್ಟಳು. ಮುಂದೆ ಆ ಮಗು ಬೆಳೆದು ದೊಡ್ಡವನಾಗಿ ಜಗತ್ಪ್ರಸಿದ್ಧ ವಿಜ್ಞಾನಿಯಾಗಿ ವಿದ್ಯುತ್ ದೀಪವನ್ನು ತಯಾರಿಸಿದ. ಆತನೇ ಥಾಮಸ್ ಅಲ್ವಾ ಎಡಿಸನ್.

ಜಗತ್ಪ್ರಸಿದ್ಧ ವಿಜ್ಞಾನಿಯಾಗಿದ್ದ ಥಾಮಸ್ ಅಲ್ವಾ ಎಡಿಸನ್ ಮುಂದೆ ತನ್ನ ತಾಯಿಯ ಮರಣ ನಂತರ ಆಕೆಯ ಪೆಟ್ಟಿಗೆಯನ್ನು ಶೋಧಿಸಿದಾಗ ಆತನ ಶಿಕ್ಷಕಿ ಬರೆದ ಈ ಪತ್ರ ದೊರೆಯಿತು. ಪತ್ರವನ್ನು ಓದಿದ ಥಾಮಸ್ ಅಲ್ವಾ ಎಡಿಸನ್.... ಒಬ್ಬ ತಾಯಿ ಮಾತ್ರ ತನ್ನ ಮಂದ ಬುದ್ಧಿಯ ಮಗನಲ್ಲೂ ಕೂಡ ಓರ್ವ ವಿಜ್ಞಾನಿಯನ್ನು ಪೋಷಿಸುವ ಧೀಮಂತಿಕೆಯನ್ನು ಹೊಂದಿರುತ್ತಾಳೆ ಎಂದು ಗದ್ಗದಿತರಾಗಿ ಉದ್ಗರಿಸಿದರು.

ನೋಡಿದಿರಾ ಸ್ನೇಹಿತರೆ, ಪ್ರೀತಿ ವಾತ್ಸಲ್ಯ ಮಮತೆಗೆ ಹೆಸರಾದ ತಾಯಿ ಮನಸ್ಸು ಮಾಡಿದರೆ ಅಜ್ಞಾನ, ಅಂಧಕಾರ ತುಂಬಿ ತುಳುಕುವಲ್ಲಿ ಕೂಡ ಜ್ಞಾನದ ಹಣತೆಯನ್ನು ಹಚ್ಚಬಲ್ಲಳು ಎಂಬುದಕ್ಕೆ ಮೇಲಿನ ಈ ಕಥೆಯೇ ಉದಾಹರಣೆ. ಇದುವೇ ತಾಯ್ತನಕ್ಕಿರುವ ತಾ-ಕತ್ತು. ಏನಂತೀರಾ?

– ವೀಣಾ ಹೇಮಂತಗೌಡ ಪಾಟೀಲ.
ಮುಂಡರಗಿ.

ಅಂಜುಮನ್ ಸಂಸ್ಥೆಯ ಅಧ್ಯಕ್ಷರಾಗಿ ತಾಜುದ್ದೀನ್ ಕಿಂಡ್ರಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಮುಳಗುಂದ ಪಟ್ಟಣದ ಅಂಜುಮನ್-ಎ-ಇಸ್ಲಾಂ ಸಂಸ್ಥೆಗೆ ಸೋಮವಾರ ಸಂಜೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಚುನಾವಣಾ ಅಧಿಕಾರಿ ತೌಶೀಫ್ ಮಕಾಂದಾರ ಅವರ ನೇತೃತ್ವದಲ್ಲಿ ನಡೆದು ಅಂಜುಮನ ಬೈಲಾ ಪ್ರಕಾರ ಸಭೆಯಲ್ಲಿ ಹಾಜರಿದ್ದ ಸದಸ್ಯರ ಒಮ್ಮತದ ಅಭಿಪ್ರಾಯದಂತೆ ಪದಾಧಿಕಾರಿಗಳಗನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ತಾಜುದ್ದೀನ್ ಎಂ ಕಿಂಡ್ರಿ, ಉಪಾಧ್ಯಕ್ಷರಾಗಿ ಅಬ್ದುಲ್ ಹಮೀದ್ ಮುಜಾವರ, ಕಾರ್ಯದರ್ಶಿಯಾಗಿ ಹೈದರ ಅಲಿ ಖವಾಸ, ಖಜಾಂಚಿಯಾಗಿ

ಮುನ್ನಾ ಢಾಲಾಯತ್ ಆಯ್ಕೆಯಾದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಗದಗ ಜಿಲ್ಲಾ ವಕ್ಫ್ ಅಧ್ಯಕ್ಷರಾದ ಜಿ ಎಂ ದಂಡಿನ ಅವರು ನೂತನ ಪದಾಧಿಕಾರಿಗಳಿಗೆ ಮಾಲಾರ್ಪಣೆ ಮಾಡಿ ಶುಭ ಕೋರಿದರು.

ಎಮ್.ಎ. ಖಾಜಿ, ಎಲ್. ಎಮ್ ಮಕಾಂದಾರ, ದಾವಲಸಾಬ ಲಕ್ಷ್ಮೇಶ್ವರ, ರಫೀಕ್ ಅಹ್ಮದ ದಲೀಲ, ಅಲ್ಲಾಭಕ್ಷಿ ಹೊಂಬಳ, ದಾವೂದ್ ಜಮಾಲ್ ಹಾಗೂ ಚುನಾವಣಾ ಅಧಿಕಾರಿ ಬಿ.ಝಡ್. ಜಮೀರ್ ಅಹ್ಮದ, ಅಬ್ದುಲ್‌ಸಾಬ ಹಳೆಮಸೂತಿ, ನಜೀರ ಡಾಲಾಯತ್ ಚುನಾವಣಾ ಪ್ರಕ್ರಿಯೆ ಸಂದರ್ಭದಲ್ಲಿ ಹಾಜರಿದ್ದರು.

ಪ್ರಶಸ್ತಿಗಳು ಜವಾಬ್ದಾರಿ ಹೆಚ್ಚಿಸುತ್ತವೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚೆಗೆ ರಾಜ್ಯ ಮಟ್ಟದ 'ವೈದ್ಯಶ್ರೀ' ಪ್ರಶಸ್ತಿ ಪುರಸ್ಕೃತ ಸಮುದಾಯ ಅರೋಗ್ಯ ಕೇಂದ್ರದ ಅರೋಗ್ಯ ಅಧಿಕಾರಿ ಡಾ.ಶ್ರೀಕಾಂತ ಕಾಟೇವಾಲೆ ಅವರನ್ನು ಪಟ್ಟಣದ ಜೈ ಕರ್ನಾಟಕ ಮಿನಿ ಗೂಡ್ಸ್ ವಾಹನ ಚಾಲಕರ ಮತ್ತು ಮಾಲೀಕರ ಸಂಘದ ವತಿಯಿಂದ ಸೋಮವಾರ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಶ್ರೀಕಾಂತ ಕಾಟೆವಾಲೆ, ಪ್ರಶಸ್ತಿಗಳು ಜವಾಬ್ದಾರಿಗಳನ್ನು ಹೆಚ್ಚಿಸುತ್ತವೆ. ವೈದ್ಯರಾದವರು ಮೊದಲು ಸಮಾಜದಲ್ಲಿ ಸೇವಾ ಮನೋಭಾವನೆಯಿಂದ ತಮ್ಮ ವೃತ್ತಿಯನ್ನು ಕೈಗೊಳ್ಳಬೇಕು. ಇಂದು ಈ ಪ್ರಶಸ್ತಿ ದೊರಕಲು

ನನ್ನ ಸೇವೆಯ ಜೊತೆ ಪಟ್ಟಣದ ಎಲ್ಲ ಜನತೆಯ ಸಹಕಾರ ಮುಖ್ಯವಾಗಿದ್ದು, ವೈದ್ಯ ವೃತ್ತಿಯಲ್ಲಿ ಸೇವೆ ಮಾಡುವ ಅವಕಾಶ ದೊರಕಿರುವದು ನನ್ನ ಭಾಗ್ಯ ಎಂದರು.

ಈ ಸಂದರ್ಭದಲ್ಲಿ ತಾಲೂಕಾ ವೈದ್ಯಾಧಿಕಾರಿ ಡಾ.ಸುಭಾಸ ದಾಯಗೊಂಡ, ಹಿರಿಯ ಅರೋಗ್ಯ ನಿರೀಕ್ಷಕ ಬಿ.ಎಸ್. ಹಿರೇಮಠ, ಮಂಜುನಾಥ ಬಸಾಪುರ, ಸುರೇಶ ಹೊನಕೇರಿ, ನಿಂಗಪ್ಪ ವಡ್ಡಟ್ಟಿ, ಮಾಬೂಸಾಬ ನವಲೂರ, ಇಮಾಮಹುಸೇನ ಬೆಟಗೇರಿ, ಮಂಜುನಾಥ ಗುಡಗೇರಿ, ಆನಂದ ಕೆರೂರ, ಶಿದ್ದಪ್ಪ ಬಾಳಿಹಳ್ಳಿಮಠ, ಮೋಹಿದ ಮುಳಗುಂದ, ಖಾನಸಾಬ ಕೋಲಕಾರ, ಶೇಖರಗೌಡ್ರ ಪಾಟೀಲ್ ಸೇರಿದಂತೆ ಅನೇಕರು ಇದ್ದರು.

ಅಸ್ಸಾಂ: ನಿರಾಶ್ರಿತ ಮಣಿಪುರ ನಿವಾಸಿಗಳನ್ನು ಭೇಟಿಯಾದ ರಾಹುಲ್ ಗಾಂಧಿ

■ ವಿಜಯಸಾಕ್ಷಿ ಸುದ್ದಿ, ಮಣಿಪುರ

ಲೋಕಸಭೆಯ ವಿರೋಧ ಪಕ್ಷದ ನಾಯಕ, ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಸೋಮವಾರ ಮಣಿಪುರದ ಜಿರಿಬಾಮ್ ಜಿಲ್ಲೆಯಿಂದ ಅಸ್ಸಾಂನಲ್ಲಿ ಆಶ್ರಯ ಪಡೆದಿರುವ ಮಣಿಪುರ ಜನರನ್ನು ಭೇಟಿ ಮಾಡಿದರು.

ಬೆಳಗ್ಗೆ 10 ಗಂಟೆ ಸುಮಾರಿಗೆ ಸಿಲ್ಚಾರ್ ವಿಮಾನ ನಿಲ್ದಾಣವನ್ನು ತಲುಪಿದ ರಾಹುಲ್ ಗಾಂಧಿ, ತಲೈನಲ್ಲಿನ ಪರಿಹಾರ ಶಿಬಿರದಲ್ಲಿ ತಂಗಿರುವ ಜನರನ್ನು ಭೇಟಿ ಮಾಡಲು ಕ್ಯಾಚಾರ್‌ನ ಲಖಿಪುರದ ಹ್ಮಾರ್‌ಖಾಪ್ಲಿಯನ್ ಪ್ರದೇಶಕ್ಕೆ ತೆರಳಿದರು.

ತಮ್ಮ ಭೇಟಿಯ ವೇಳೆ ಅಲ್ಲಿ ನೆಲೆಸಿದ್ದ ಜನರೊಂದಿಗೆ ಮಾತನಾಡಿದ ರಾಹುಲ್, ಮಣಿಪುರ ಜನರ ಸಮಸ್ಯೆಗಳನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸುವುದಾಗಿ

ಭರವಸೆ ನೀಡಿದರು.

ಸ್ಥಳಾಂತರಗೊಂಡ ಜನರು ತಮ್ಮ ಮೇಲೆ ಪರಿಣಾಮ ಬೀರುವ ಸಮಸ್ಯೆಗಳ ಕುರಿತು ರಾಹುಲ್ ಗಾಂಧಿಯವರಿಗೆ ಜ್ಞಾಪಕ ಪತ್ರವನ್ನೂ ಸಲ್ಲಿಸಿದರು. ಮಣಿಪುರದ ಜಿರಿಬಾಮ್‌ನ ಸುಮಾರು 1,700 ನಿವಾಸಿಗಳು ಕಳೆದ ತಿಂಗಳು ಜನಾಂಗೀಯ ಘರ್ಷಣೆಯಿಂದ ಪೀಡಿತ ರಾಜ್ಯದಲ್ಲಿ ಹಿಂಸಾಚಾರದ ಹೊಸ ಉಲ್ಬಣಗೊಂಡ ನಂತರ ನೆರೆಯ ಅಸ್ಸಾಂಗೆ ಪ್ರವೇಶಿಸಿದ್ದರು.

ಪರಿಹಾರ ಶಿಬಿರಕ್ಕೆ ತಮ್ಮ ಪ್ರವಾಸದ ನಂತರ, ರಾಹುಲ್ ಗಾಂಧಿಯವರು ರಸ್ತೆಯ ಮೂಲಕ ಮಣಿಪುರದ ಜಿರಿಬಾಮ್‌ಗೆ ಪ್ರಯಾಣಿಸುತ್ತಾರೆ, ಅಲ್ಲಿ ಅವರು ಜಿರಿಬಾಮ್ ಹೈಯರ್ ಸೆಕೆಂಡರಿ ಶಾಲೆಯಲ್ಲಿನ ಪರಿಹಾರ ಶಿಬಿರಕ್ಕೆ ಭೇಟಿ ನೀಡಲಿದ್ದಾರೆ.

ಅಲ್ಲಿಂದ ರಸ್ತೆ ಮಾರ್ಗವಾಗಿ ಸಿಲ್ಚಾರ್ ಗೆ ಹಿಂತಿರುಗಿ ವಿಶೇಷ ವಿಮಾನದಲ್ಲಿ ಮಣಿಪುರ ರಾಜಧಾನಿ ಇಂಫಾಲಕ್ಕೆ ತೆರಳಲಿದ್ದಾರೆ. ಇಂಫಾಲ್ ತಲುಪಿದ ನಂತರ, ಅವರು ರಸ್ತೆ ಮೂಲಕ ಚುರಾಚಂದ್‌ಪುರ ಜಿಲ್ಲೆಗೆ ಪ್ರಯಾಣಿಸುತ್ತಾರೆ ಮತ್ತು ಟುಂಬುಬಾಂಗ್‌ನಲ್ಲಿರುವ ಮಂಡಪ್‌ನಲ್ಲಿರುವ ಪರಿಹಾರ ಶಿಬಿರಕ್ಕೆ ಭೇಟಿ ನೀಡುತ್ತಾರೆ.

ನಾಳೆ ಅವರು ರಸ್ತೆಯ ಮೂಲಕ ಮೈತೆಯಿ ಪ್ರಾಬಲ್ಯದ ಮೊಯಿರಾಂಗ್‌ಗೆ ಪ್ರಯಾಣಿಸುತ್ತಾರೆ ಮತ್ತು ಪುಬಾಲಾ ಹೈಸ್ಕೂಲ್‌ನಲ್ಲಿರುವ ಮತ್ತೊಂದು ಪರಿಹಾರ ಶಿಬಿರ-ಕ್ಕೆ ಭೇಟಿ ನೀಡುತ್ತಾರೆ. ನಂತರ, ಇಂಫಾಲಕ್ಕೆ ತೆರಳಲಿರುವ ರಾಹುಲ್ ಗಾಂಧಿ ಅಲ್ಲಿ ರಾಜಭವನದಲ್ಲಿ ರಾಜ್ಯಪಾಲ ಅನುಸೂಯಾ ಉಯಿಕೆ ಅವರನ್ನು ಭೇಟಿಯಾಗಲಿದ್ದಾರೆ.

ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ಸಹಾಯಧನ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಜುಲೈ 30 ಕೊನೆಯ ದಿನವಾಗಿದೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿ ತೋಟಗಾರಿ-ಕೆ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ (ಹಣ್ಣು, ತರಕಾರಿ ಮತ್ತು ಹೂ), ವೈಯಕ್ತಿಕ ಮತ್ತು ಸಮುದಾಯ ನೀರು ಸಂಗ್ರಹಣಾ ಘಟಕ, ಪಾಲಿ ಮನೆ ಘಟಕ, ಮಿನಿ ಟ್ರ್ಯಾಕ್ಟರ್, ಪ್ಯಾಕ್ಹೌಸ್, ಈರುಳ್ಳಿ ಸಂಗ್ರಹಣಾ ಘಟಕಗಳಿಗೆ ಸಹಾಯಧನ ಲಭ್ಯವಿರುತ್ತದೆ.

ಕೃಷಿ ಯಾಂತ್ರೀಕರಣ ಉಪ ಅಭಿಯಾನದಡಿ ಕೃಷಿ ಯಂತ್ರೋಪಕರಣ ಖರೀದಿಗೆ ಪ. ಜಾತಿ, ಪ. ಪಂಗಡ, ಸಣ್ಣ, ಅತೀ ಸಣ್ಣ ಮತ್ತು ರೈತ ಮಹಿಳೆಯರಿಗೆ ಶೇ 50ರಷ್ಟು ಮತ್ತು ದೊಡ್ಡ ರೈತರಿಗೆ ಶೇ 40ರಷ್ಟು ಸಹಾಯಧನ ನೀಡಲಾಗುವುದ

ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ, ನೂತನ ಸಂಸದರಿಗೆ ಸನ್ಮಾನ

ಪೋಷಕರು, ಯುವಕರು ಆತ್ಮಾವಲೋಕನ ಮಾಡಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗಾಣಿಗ ಸಮುದಾಯ ಶರಣ ಮತ್ತು ಶ್ರಮ ಸಂಸ್ಕೃತಿಗೆ ಹೆಸರುವಾಸಿ. ರಾಜ್ಯದಲ್ಲಿ ಈ ಸಮುದಾಯಕ್ಕೆ ವಿಶೇಷ ಗೌರವ ಇದೆ. ಗಾಣಿಗ ಸಮಾಜದ ಶ್ರಮದಿಂದ ನಿರ್ಮಾಣಗೊಂಡಿರುವ ಈ ಭವನ ಮಾದರಿಯಾಗಿದೆ. ಇಲ್ಲಿ ಸಂಸ್ಕಾರ ನೀಡುವಂತಹ ಕಾರ್ಯಕ್ರಮಗಳು ನಡೆಯುವ ಮೂಲಕ ಸಾಂಸ್ಕೃತಿಕ ಭವನವಾಗಿ ರೂಪುಗೊಳ್ಳಲಿ ಎಂದು ಸಂಸದ ಬಸವರಾಜ ಬೊಮ್ಮಯಿ ಹೇಳಿದರು.

ಅವರು ರವಿವಾರ ನಗರದ ಗಾಣಿಗ ಸಮುದಾಯ ಭವನದಲ್ಲಿ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್ ಗದಗ ಇವರ ಆಶ್ರಯದಲ್ಲಿ ಜರುಗಿದ ಪ್ರತಿಭಾ ಪುರಸ್ಕಾರ, ನೂತನ ಸಂಸದರಿಗೆ ಸನ್ಮಾನ ಹಾಗೂ ಗಾಣಿಗ ಭವನ ಕಟ್ಟಡದ ದಾನಿಗಳಿಗೆ ಸನ್ಮಾನ, ವಾರ್ಷಿಕ ಸಭೆಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ತಮ್ಮ ಮಕ್ಕಳಿಗೆ ಆಸಕ್ತಿಯಂತೆ ಶಿಕ್ಷಣ ಕೊಡಿಸಿ, ನಮ್ಮ ಪೂರ್ವಜರು ಉಳಿಸಿಕೊಂಡು ಬಂದಿದ್ದ ಸಂಬಂಧಗಳ ಮೌಲ್ಯಗಳು ಇಂದು ನಾಟಕೀಯವಾಗುತ್ತಿರುವುದು ದುರಂತವೇ ಸರಿ. ಇಂದು ಹಣದ ಹಿಂದೆ ಜಗುತ್ತು ಓಡುತ್ತಿದೆ. ಈ ಮಾಯೆಯಲ್ಲಿ ತಂದೆ-ತಾಯಿ, ಮಕ್ಕಳ ಪ್ರೀತಿ, ಬಾಂಧವ್ಯ ಮರೆಯಾಗುತ್ತಿದೆ. ಇಳಿವಯಸ್ಸಿನಲ್ಲಿ ಮಕ್ಕಳು ಸಹ ಜೊತೆಯಲ್ಲಿ ಇಲ್ಲದಿರುವುದು ಯಾವ ಸಾಧನೆ ಮಾಡಿದಂತೆ? ಇದನ್ನು ಪೋಷಕರು, ಯುವಕರು ಆತ್ಮವಲೋಕನ ಮಾಡಿಕೊಳ್ಳಬೇಕಾದ ಅಗತ್ಯತೆ ಇದೆ ಎಂದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ದೊಡ್ಡದಾದ ಮಾದರಿ ಕಲ್ಯಾಣ ಮಂಟಪ ಕಟ್ಟಿದ್ದೀರಿ. ಎರಡು ಬಾರಿ ವಿಧಾನ ಪರಿಷತ್ ಸದಸ್ಯನಾಗಲು ಗಾಣಿಗ ಸಮಾಜದವರು ಸಂಪೂರ್ಣ ಬೆಂಬಲ ಕೊಟ್ಟಿದ್ದು, ಅದಕ್ಕೆ ಚಿರಋಣಿಯಾಗಿರುವೆ ಎಂದರು.

ಯುವ ಕಾಂಗ್ರೆಸ್ ಮುಖಂಡ ಚಿದಾನಂದ ಎಲ್.ಸವದಿ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಮುದಾಯದ ಅಧ್ಯಕ್ಷ ಬಸವರಾಜ ಬಿಂಗಿ ವಹಿಸಿದ್ದರು. ಡಾ. ಶ್ರೀ ಜಯ ಬಸವಕುಮಾರ ಮಹಾಸ್ವಾಮಿಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಇದೇ ಸಂದರ್ಭದಲ್ಲಿ ಸಂಸದ ಬಸವರಾಜ ಬೊಮ್ಮಾಯಿ, ಬಾಗಲಕೋಟಿ ಸಂಸದ ಪಿ.ಸಿ. ಗದ್ದಿಗೌಡರ ಗದಗ ಪಿ.ಎಲ್.ಡಿ. ಬ್ಯಾಂಕ್ ಅಧ್ಯಕ್ಷ ಚಂದ್ರಪ್ಪ ಕರಿಕಟ್ಟಿ ಅವನ್ನು ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ಷಣ್ಮುಖ ಬಡ್ನಿ, ಎನ್.ಎಸ್. ಕೆಂಗಾರ, ಡಾ. ಶೇಖರ ಸಜ್ಜನರ, ಬಿ.ಬಿ. ಐನಾಪೂರ, ಬಸವರಾಜ ನವಲಗುಂದ, ಎಚ್.ಬಿ. ತೋರಗಲ್, ರಮೇಶ ಕಪ್ಪತ್ತನವರ, ಸುಭಾಸ ಬಾಟಕುಕಿ ಮುರಘರಾಜೇಂದ್ರ ಬಡ್ನಿ, ಸುರೇಶ ಮರಳಪ್ಪನವರ, ಎಸ್.ವ್ಹಿ. ಪವಾಡಿಗೌಡ್ರ, ಗಿರಿಯಪ್ಪ ಅಸೂಟಿ, ಶ್ರೀಕಾಂತ ಲಕ್ಕುಂಡಿ, ತೋಟಪ್ಪ ಗಾಣಿಗೇರ, ಪರುಶುರಾಮ ಅಳಗವಾಡಿ, ಆಯ್.ಎಂ. ಕಿರೇಸೂರ, ಅಶೋಕ ಗುಜಮಾಗಡಿ, ಬಿ.ಎಸ್. ವಡವಟ್ಟಿ, ಗಂಗಾಧರ ಗಾಣಿಗೇರ, ರಮೇಶ ಮಂದಾಲಿ, ಶಿವಣ್ಣ ಹಟ್ನಳ್ಳಿ, ಬಸವಂತಪ್ಪ ನವಲಳ್ಳಿ, ದಶರಥ ಗಾಣಿಗೇರ, ಮಲ್ಲಪ್ಪ ಕೊಳ್ಳೇರಿ, ಹಾಲಪ್ಪ ಬಣವಿ, ಫಕ್ಕೀರಪ್ಪ ಸಂಧಗಿ, ಪ್ರಕಾಶ ವಿ.ಮುಧೋಳ, ಬಸವರಾಜ ಸುಂಕದ, ಸೋಮನಗೌಡ ಪಾಟೀಲ, ಅಮರೇಶ ಹಾದಿ, ಜಗದೀಶ ಬೆಳವಟಗಿ, ಮಲಕೇಶಗೌಡ ಪಾಟೀಲ, ಸಂದೀಪ ಕಪ್ಪತ್ತನವರ ಅಶೋಕ ಮಂದಾಲಿ ಯಚ್ಚರಗೌಡ ಗೋವಿಂದಗೌಡ್ರ ಮತ್ತಿತರರು ಹಾಜರಿದ್ದರು.

> ಸಮುದಾಯದ ಹಿರಿಯ ಮುಖಂಡ ದಶ್ರಥ ಗಾಣಿಗೇರ ಮಾತನಾಡಿ, ಗಾಣಿಗ ಸಮುದಾಯಕ್ಕೆ ಭೀಮನ ಭಕ್ತಿಯಿದೆ. ಆದರೆ, ಲಿಂಗ, ವಿಭೂತಿ, ಗುರು ಸೇರಿ ಅಷ್ಟಾವರಣಗಳ ಕೊರತೆಯಿದೆ. ಅದನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು. ಈ ಸಮಾಜಕ್ಕೆ ಎಲ್ಲ ವ್ಯವಹಾರಗಳು ಒಲಿಯುತ್ತವೆ. ಇದಕ್ಕೆ ಅವರ ಶ್ರಮ, ಪ್ರಾಮಾಣಿಕತೆ ಹಾಗೂ ನಿಷ್ಠೆ ಕಾರಣ ಎಂದರು.

ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಡೆಂಘೀ ಜ್ವರದ ಹಾವಳಿ ದಿನೇ ದಿನೇ ಹೆಚ್ಚುತ್ತಿದೆ. ಝಿಕಾ ವೈರಾಣು ಸೋಂಕು, ಚಿಕುನ್ ಗುನ್ಯಾ ರಾಜ್ಯದಲ್ಲಿ ಸದ್ದು ಮಾಡುತ್ತಿವೆ. ಸರಕಾರ ಈ ಬಗ್ಗೆ ತುರ್ತು ಕ್ರಮ ಕೈಗೊಳ್ಳಬೇಕೆಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಸರಕಾರವನ್ನು ಆಗ್ರಹಿಸಿದ್ದಾರೆ.

ಮಾಧ್ಯಮಗಳ ವರದಿಯ ಪ್ರಕಾರ ಈಗಾಗಲೇ ಡೆಂಘೀ ಪೀಡಿತರ ಸಂಖ್ಯೆ 7164 ದಾಖಲಾಗಿವೆ. ಈ ಸಾಂಕ್ರಾಮಿಕ ರೋಗ ತಡೆಗಟ್ಟಲು ಸರಕಾರ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಮುಂದಾಗಬೇಕು. ಝಿಕಾ ಸೋಂಕು, ಚಿಕುನ್ ಗುನ್ಯಾ ಮುಂತಾದ ರೋಗಗಳು ವ್ಯಾಪಕವಾಗುವುದಕ್ಕೆ ಮೊದಲೇ ಆರೋಗ್ಯ ಇಲಾಖೆ ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸಬೇಕಾಗಿದೆ. ಜನಸಾಮಾನ್ಯರಿಗೆ ಕೈಗೆಟುಕುವ ದರದಲ್ಲಿ ಚಿಕಿತ್ಸೆ ದೊರೆಯಲು ಕ್ರಮ ಕೈಗೊಳ್ಳಬೇಕಿದೆ ಎಂದು ಅವರು ಆಗ್ರಹಿಸಿದ್ದಾರೆ.

ಮನೋರಮಾ ವಿದ್ಯಾರ್ಥಿಗಳ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿರುವ ಕೆಎಲ್ಇ ಸೊಸೈಟಿಯ ಬಿಸಿಎ ವಿಭಾಗದವರು ಆಯೋಜಿಸಿದ ಪಿಯೆಸ್ತಾ ಸ್ಯೆಂಥವೇವ್ಸ್ ಫೆಸ್ಟ್‌ನಲ್ಲಿ ಮನೋರಮಾ ಕಾಲೇಜಿನ ವಿದ್ಯಾರ್ಥಿಗಳಾದ ಸೃಷ್ಟಿ ಬಿನ್ನಾಳ, ವೀಣಾ ಚುಡಗುಂದ ಕೀರ್ತಿ ಹೊಸಮಠ, ಶ್ರಾವಣಿ ಕುಲಕರ್ಣಿ ಭಾಗವಹಿಸಿ ನೃತ್ಯದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ವರ್ಚುವಲ್ ವೆಂಚರ್ ಶ್ರಾವಣಿ ಕುಲಕರ್ಣಿ, ಶ್ರೀನಿಧಿ, ಕೃಷ್ಣಾ ಹಾಗೂ ಹರೀಶ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿಗಳಾದ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಹ ಸಂಯೋಜಕರಾದ ಪ್ರೊ. ಸವಿತಾ ಪೂಜಾರ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

ಅಂಜುಮನ್ ಸಂಸ್ಥೆಯ ಸದಸ್ಯರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಅಂಜುಮನ್-ಎ-ಇಸ್ಲಾಂ ಸಂಸ್ಥೆಗೆ ನೂತನವಾಗಿ ಆಯ್ಕೆಯಾದ ಸರ್ವ ಸದಸ್ಯರಿಗೆ ಮುಳಗುಂದ ಆಯುಷ್ ವೈದ್ಯರ ಸಂಘದಿಂದ ಸನ್ಮಾನಿಸಲಾಯಿತು. ಹಿರಿಯ ವೈದ್ಯರಾದ ಡಾ. ಪಿ.ಎಸ್. ಜಕ್ಕನಗೌಡ್ರ ಮಾತನಾಡಿ, ನಿಮ್ಮ ಸೇವೆ ಕೇವಲ ಒಂದು ಸಮುದಾಯಕ್ಕೆ ಮೀಸಲಾಗದೇ ಸರ್ವ ಸಮಾಜಕ್ಕೂ ನೀಡಬೇಕು. ಕುಂಠಿತವಾಗಿ ಉಳಿದ ಸಮುದಾಯದ ಅಭಿವೃದ್ಧಿ ಕೆಲಸಗಳು ನಿಮ್ಮಿಂದಾಗಲಿ ಎಂದು ಸಲಹೆ ನೀಡಿ ನೂತನ ಸದಸ್ಯರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಎಂ.ಎ. ಖಾಜಿ, ತಾಜುದ್ದೀನ ಕಿಂಡ್ರಿ, ಹಮೀದ ಮುಜಾವರ, ಹೈದರ ಖವಾಸ, ಮುನ್ನಾ ಢಾಲಾಯತ್, ದಾವಲಸಾಬ ಲಕ್ಷ್ಮೇಶ್ವರ, ರಫೀಕ್ ದಲೀಲ, ಲಾಲಷಾಪೀರ ಮಕಾಂದಾರ, ಅಲ್ಲಾಭಕ್ಷಿ ಹೊಂಬಳ, ದಾವೂದ್ ಜಮಾಲ್ ಸನ್ಮಾನ ಸ್ವೀಕರಿಸಿದರು. ವೈದ್ಯರಾದ ಡಾ. ಎಸ್.ಕೆ. ಮಟ್ಟಿ, ಡಾ. ಸಂಜೀವರಡ್ಡಿ, ಡಾ. ಬದಾಮಿ ಶುಭ ಕೋರಿದರು. ಖಲಂದರ ಗಾಡಿ, ರಫೀಕ್ ಸದರಬಾವಿ, ಅಬ್ದುಲಸಾಬ ಹಳೆಮಸೂತಿ ಮುಂತಾದವರಿದ್ದರು.

ಮುಕ್ತಿಧಾಮದ ದುರಸ್ತಿಗೆ ಅನುದಾನ ಕಲ್ಪಿಸುವೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಯಜ್ಞೋಪವೀತ ಸಮಾಜ ಬಾಂಧವರು ಗಜೇಂದ್ರಗಡ ರಸ್ತೆಯಲ್ಲಿ ನಿರ್ಮಿಸಿರುವ ಮುಕ್ತಿಧಾಮವು ಶಿಥಿಲಾವಸ್ಥೆಗೆ ತಲುಪಿದ್ದು, ಅದರ ಜೀರ್ಣೋದ್ಧಾರಕ್ಕೆ ಅವಶ್ಯವಿರುವ ಅನುದಾನವನ್ನು ಒದಗಿಸುವೆ ಎಂದು ಶಾಸಕ ಜಿ.ಎಸ್. ಪಾಟೀಲ ಭರವಸೆ ನೀಡಿದರು.

ಮುಕ್ತಿಧಾಮ ಜೀರ್ಣೋದ್ಧಾರ ಸಮಿತಿಯ ವತಿಯಿಂದ ಸಲ್ಲಿಸಿದ ಮನವಿಯನ್ನು ಸ್ವೀಕರಿಸಿ ಶಾಸಕರು ಮಾತನಾಡಿದರು.

ಸಮಿತಿಯ ಅಧ್ಯಕ್ಷ ಗುರುರಾಜ ಕುಲಕರ್ಣಿ ಮಾತನಾಡಿ, ಗಜೇಂದ್ರಗಡ ರಸ್ತೆಯಲ್ಲಿ ಯಜ್ಞೋಪವಿತ ಸಮಾಜದ ಸ್ಮಶಾನವಿದೆ. ಈ ಹಿಂದೆ ಧರ್ಮಸ್ಥಳದ ಶ್ರೀ ಮಂಜುನಾಥೇಶ್ವರ ಟ್ರಸ್ಟ್‌ನ ಸಹಾಯದಿಂದ ಅದನ್ನು ಅಭಿವೃದ್ಧಿಪಡಿಸಿದ್ದೇವೆ. ಅಂದು ಬಾಗಲಕೋಟೆ ಸಂಸದರಾಗಿದ್ದ ಆರ್.ಎಸ್. ಪಾಟೀಲರೂ ಅನುದಾನ ನೀಡಿ ಅದರ ಅಭಿವೃದ್ಧಿಗೆ ಕಾರಣರಾಗಿದ್ದರು. ಈಗ ಸ್ಮಶಾನವು ಶಿಥಿಲಾವಸ್ಥೆಗೆ ತಲುಪಿದ್ದು, ಅಂತ್ಯ ಸಂಸ್ಕಾರಕ್ಕೆ ಹೋಗಲು ತೊಂದರೆ ಆಗುತ್ತಿದೆ. ತಮ್ಮ ಅನುದಾನದಲ್ಲಿ 5 ಲಕ್ಷ ರೂ ಬಿಡುಗಡೆ ಮಾಡಿಸಿ ಸ್ಮಶಾನ ದುರಸ್ತಿಗೆ ಅನುಕೂಲ ಮಾಡಿಕೊಡಬೇಕು ಎಂದರು.

ಈ ಸಂದರ್ಭದಲ್ಲಿ ಸಮಿತಿಯ ಖಜಾಂಚಿ ವಿನಾಯಕ ಗ್ರಾಮಪುರೋಹಿತ, ದತ್ತಭಕ್ತ ಮಂಡಳಿ ಅಧ್ಯಕ್ಷ ಡಾ. ಎನ್.ಎಲ್. ಗ್ರಾಮಪುರೋಹಿತ, ಕಾರ್ಯದರ್ಶಿ ರಘುನಾಥ ಕೊಂಡಿ, ನಾರಾಯಣಪ್ಪ ವಡ್ಡಟ್ಟಿ, ಮುತ್ತಣ್ಣ ಹೂಲಗೇರಿ, ಶೇಷಗಿರಿರಾವ ಕುಲಕರ್ಣಿ, ಎ.ಜಿ. ಕುಲಕರ್ಣಿ, ಎಸ್. ಎಚ್. ಕುಲಕರ್ಣಿ, ಅರುಣ ಕುಲಕರ್ಣಿ, ಆನಂದ ಕುಲಕರ್ಣಿ, ನಾಗೇಶ್‌ಭಟ್ ಗ್ರಾಮಪುರೋಹಿತ, ಪ್ರಶಾಂತ ಗ್ರಾಮಪುರೋಹಿತ, ಹರೀಶ ಕುಲಕರ್ಣಿ, ಆದರ್ಶ ಕುಲಕರ್ಣಿ, ಪ್ರಕಾಶ ಕಾಳೆ ಸೇರಿದಂತೆ ಯಜ್ಞೋಪವಿತ ಸಮಾಜದ ಸದಸ್ಯರು ಇದ್ದರು.

ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿರಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯ ಸಾರ್ವಜನಿಕರಿಗೆ ತಿಳಿಸುವುದೆನೆಂದರೆ ನಂ.-12 ರ ಹುಲಕಡ್ಡಿ ಓಣಿಯ ಆಸ್ತಿ ನಂ.-2/89 ಶ್ರೀ ಸಿದ್ದೇಶ್ವರ ದೇವಸ್ಥಾನ, ಶಿರಹಟ್ಟಿ ಇದರ ಆಸ್ತಿಯ ಮಾಲೀಕತ್ವದ ನಿವೇಶನದಲ್ಲಿ ಶ್ರೀ ಸಿದ್ಧೇಶ್ವರ ದೇವಸ್ಥಾನ ನಿರ್ಮಾಣ ಮಾಡುವ ಕುರಿತು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲಾಗಿದೆ. ಸದರಿ ಕಟ್ಟಡಕ್ಕೆ ಸಂಬಂಧಿಸಿದಂತೆ ಯಾವುದಾದರೂ ತಂಟೆ, ತಕರಾರು ಇದ್ದಲ್ಲಿ ಮುಖ್ಯಾಧಿಕಾರಿಗಳ ಕಾರ್ಯಾಲಯ, ಪಟ್ಟಣ ಪಂಚಾಯತ್ ಶಿರಹಟ್ಟಿ ಇಲ್ಲಿ 7 ದಿನಗಳೊಳಗಾಗಿ ಅರ್ಜಿ ಸಲ್ಲಿಸಬೇಕು. ಇಲ್ಲದಿದ್ದಲ್ಲಿ ಯಾವುದೇ ತಂಟೆ-ತಕರಾರು ಇರುವುದಿಲ್ಲವೆಂದು ತಿಳಿದು ಸದರಿಯವರಿಗೆ ಕಟ್ಟಡ ಪರವಾನಿಗೆಯನ್ನು ನೀಡಲಾಗುವುದು ಎಂದು ಶಿರಹಟ್ಟಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತೋಂಟದಾರ್ಯ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಯೋಗ ತರಬೇತಿ

ವಿದ್ಯಾರ್ಥಿಗಳ ಸಾಧನೆಗೆ ಯೋಗ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅನೇಕ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ನೂರಕ್ಕೆ ನೂರು ಅಂಕ ಪಡೆಯುವ ಸಾಮರ್ಥ್ಯ ಹೊಂದಿದ್ದಾರೆ. ಆದರೆ ಈ ಸಾಮರ್ಥ್ಯ ಎಲ್ಲ ವಿದ್ಯಾರ್ಥಿಗಳಲ್ಲಿ ಇರುವುದಿಲ್ಲ. ಕಾರಣ ಅವರು ದೈಹಿಕ, ಮಾನಸಿಕವಾಗಿ ಸದೃಢರಾಗಿರುವದಿಲ್ಲ.

ವಿದ್ಯಾರ್ಥಿಗಳ ದೇಹ, ಮನಸ್ಸುಗಳು ಸದೃಢವಾಗಿರಲು ಯೋಗ ಸುಲಭೋಪಾಯವಾಗಿದೆ.

ಯೋಗದಿಂದ ವಿದ್ಯಾರ್ಥಿಗಳ ದೇಹ ಮನಸ್ಸುಗಳು ಸಶಕ್ತಗೊಂಡು ಅವರಲ್ಲಿ ಆಲೋಚನಾ ಶಕ್ತಿ ಹೆಚ್ಚುವುದು. ಇದರಿಂದ ಅವರು ಒಳ್ಳೆಯದನ್ನು ರೂಢಿಸಿಕೊಳ್ಳುವರು. ಅವರಲ್ಲಿ ಅಭಿರುಚಿ, ಆಸಕ್ತಿ, ಕಲಿಕಾ ಗುಣಾಶಂಗಳು ಬೆಳೆದು ಅಧ್ಯಯನಶೀಲರಾಗುವರು ಎಂದು ತೋಂಟದಾರ್ಯ ಪಾಲಿಟೆಕ್ನಿಕ್ ಕಾಲೇಜು ಪ್ರಾಚಾರ್ಯ ವಿನೋದ ರಾಯ್ಕರ ಅಭಿಪ್ರಾಯಪಟ್ಟರು.

ಶ್ರೀ ಜಗದ್ಗುರು ತೆ-ಂಟದಾರ್ಯ ಕಲ್ಯಾಣ ಕೇಂದ್ರದ ತೋಂಟದಾರ್ಯ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ ಯೋಗ ತರಬೇತಿ ಶಿಬಿರದ ಪ್ರಾರಂಭೊತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಠ್ಯ ಜೊತೆಗೆ ಪಠ್ಯೇತರ ಚಟುವಟಿಕೆಗಳಿಂದ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಉತ್ಸಾಹ, ಹುಮ್ಮಸ್ಸು ಹೆಚ್ಚಲೆಂಬ ಉದ್ದೇಶದಿಂದ ಈ ಯೋಗ ತರಬೇತಿ ಶಿಬಿರ ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಸೂಚಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಸವಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಇಂದು ಯೋಗ ವಿಶ್ವದಾದ್ಯಂತ ಹೆಚ್ಚಿನ ಮಾನ್ಯತೆ ಪಡೆದಿದೆ. ಇಂದಿನ ಕಲುಷಿತ ಪರಿಸರದಲ್ಲಿ ನಾವೆಲ್ಲ ಆರೋಗ್ಯವಂತರಾಗಿರಲು ಯೋಗ ಸಹಾಯಕವಾಗಿದೆ. ವಿದ್ಯಾರ್ಥಿಗಳಿಗಂತೂ ಯೋಗದ ಅವಶ್ಯಕತೆ ಸಾಕಷ್ಟಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗಾಗಿ ಯೋಗ ತರಬೇತಿ ಶಿಬಿರ ಏರ್ಪಡಿಸಿರುವದು ಶ್ಲಾಘನೀಯ ಎಂದು ಹೇಳಿದರು.

ವೇದಿಕೆಯಲ್ಲಿ ಕಾಲೇಜಿನ ಹಿರಿಯ ಉಪನ್ಯಾಸಕ ಜಿ.ಎಂ. ಶಿವಶಿಂಪರ, ಉಪನ್ಯಾಸಕಿ ಜಿ.ಎಸ್. ದಾದ್ಮೀ, ಯೋಗ ತರಬೇತುದಾರ ಬಸವ ಯೋಗ ಮಹಾವಿದ್ಯಾಲಯದ ಸಹ ಶಿಕ್ಷಕ ಚೇತನ ಚುಂಚಾ ಉಪಸ್ಥಿತರಿದ್ದರು.

ಪ್ರಿಯಾ ಪ್ರಾರ್ಥನೆ ಹೇಳಿದರು. ಉಪನ್ಯಾಸಕಿ ನಂದಾ ಇಟಗಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಮೆಕ್ಯಾನಿಕ್ ವಿಭಾಗದ ಮುಖ್ಯಸ್ಥ ಎಂ.ಎಂ. ಉಪ್ಪಿನ ವಂದಿಸಿದರು.

ಡೆಂಗ್ಯೂ, ಮಲೇರಿಯಾ ನಿಯಂತ್ರಣಕ್ಕೆ ಕ್ರಮವಹಿಸಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದಲ್ಲಿ ಡೆಂಗ್ಯೂ, ಮಲೇರಿಯಾ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಕ್ರಮ ಕೈಕೊಳ್ಳುವಂತೆ ಕರ್ನಾಟಕ ಯುವರಕ್ಷಣಾ ವೇದಿಕೆ ತಾಲೂಕಾ ಘಟಕದ ವತಿಯಿಂದ ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ರಿಯಾಜ ತಹಸೀಲ್ದಾರ, ಜಿಲ್ಲೆಯಲ್ಲಿ ಈಗಾಗಲೇ ಮಳೆ ಪ್ರಾರಂಭವಾಗಿದ್ದು, ರಾಜ್ಯದಲ್ಲಿ ಮಲೇರಿಯಾ, ಡೆಂಗ್ಯೂ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಪಟ್ಟಣದ ಎಲ್ಲಾ ವಾರ್ಡ್‌ಗಳಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಮನೆಯಲ್ಲಿ ಸಂಗ್ರಹಿಸಿಟ್ಟಿರುವ ನೀರಿನಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತಿವೆ. ಚರಂಡಿಗಳಲ್ಲಿ ಸರಿಯಾಗಿ ನೀರು ಹರಿಯದೇ ಇರುವುದರಿಂದ ನೀರು ನಿಂತು ದುರ್ವಾಸನೆ ಬೀರುತ್ತಿವೆ. ಆದ್ದರಿಂದ ಪಟ್ಟಣದ ಎಲ್ಲಾ ವಾರ್ಡ್‌ಗಳಲ್ಲಿ ಸೊಳ್ಳೆ ನಿಯಂತ್ರಣದ ಔಷಧಿಯನ್ನು ಸಿಂಪಡಿಸಿ, ಚರಂಡಿಗಳನ್ನು ಸ್ವಚ್ಛಗೊಳಿಸಿ, ಧ್ವನಿವರ್ಧಕ ಮೂಲಕ ರೋಗದ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಮನವಿ ಸಲ್ಲಿಸಿದರು.

ಮುಸ್ತಾಕ

ಡಾ. ಎಸ್.ಎಫ್. ಸಿದ್ನೆಕೊಪ್ಪರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

ಶ್ರೇಷ್ಠ ವ್ಯಕ್ತಿಗಳ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶ ಕಟ್ಟುವ, ಸೃಜನಶೀಲ ಸಮಾಜವನ್ನು ನಿರ್ಮಿಸುವ ಮಾನವೀಯ ಮೌಲ್ಯಗಳಿಗೆ ಮನ್ನಣೆ ನೀಡುವ ಶಿಷ್ಯರನ್ನು ಅರ್ಪಿಸುವ ಕೆಲಸ ಮಾಡುತ್ತಾ ಬರುವುದರ ಮೂಲಕ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ನಿರ್ಮಿಸಲು ಶ್ರಮಿಸಿ, ಸೇವಾ ನಿವೃತ್ತರಾಗುತ್ತಿರುವ ಡಾ. ಎಸ್.ಎಫ್. ಸಿದ್ನೆಕೊಪ್ಪ ಅವರ ಕಾರ್ಯ ಪ್ರಶಂಸನೀಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ್ ಹೇಳಿದರು.

ಗದಗ-ಬೇಟಗೇರಿ ಹೊರವಲಯದ ನಾಗಸಮುದ್ರ ರಸ್ತೆಯಲ್ಲಿರುವ ಸರ್ಕಾರಿ ಪ್ರಥಮದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಜರುಗಿದ ಡಾ. ಎಸ್. ಎಫ್. ಸಿದ್ನೆಕೊಪ್ಪರ ಹೃದಯಸ್ಪರ್ಶಿ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಕರು ತಮ್ಮ ತ್ಯಾಗ ಮತ್ತು ಸಮರ್ಪಣಾ ಮನೋಭಾವದಿಂದಲೇ ತಮ್ಮ ಶಿಷ್ಯರ ಮನಃಪಟಲದಲ್ಲಿ ಸದಾ ಕಾಲ ನಿಲ್ಲುತ್ತಾರೆ. ಇವತ್ತು ಜಗತ್ತಿನ ಶ್ರೇಷ್ಠ ವ್ಯಕ್ತಿಗಳ ನಿರ್ಮಾಣ ಶಿಕ್ಷಕರಿಂದ ಸಾಧ್ಯವಾಗಿದೆ. ಆ ಹಿನ್ನೆಲೆಯಲ್ಲಿ ಶ್ರಮಿಸಿರುವ ಸಿದ್ನೇಕೊಪ್ಪ ಅವರ ಸುದೀರ್ಘ ಸೇವೆ ಜನಮಾನಸದಲ್ಲಿ ನೆಲೆ ನಿಲ್ಲುವಂತಹದು ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಡಾ. ಎಸ್.ಎಫ್. ಸಿದ್ನೆಕೊಪ್ಪ ಮಾತನಾಡಿ, ದೇಶದ ನಿಜವಾದ ಭವಿಷ್ಯ ಅಡಗಿರುವುದು ವಿದ್ಯಾರ್ಥಿಗಳ ಕೈಯಲ್ಲಿ. ಅಂತಹ ವ್ಯಕ್ತಿತ್ವ ರೂಪಿಸುವ ಶಿಕ್ಷಕರ ಕಾರ್ಯ ಮಹತ್ವಪೂರ್ಣವಾದದ್ದು. ಅವರ ಭವಿಷ್ಯಕ್ಕಾಗಿ ಶಿಕ್ಷಕ ವೃಂದ ಮತ್ತು ಪಾಲಕರು ಶ್ರಮಿಸಲು ಮುಂದಾಗಿ ಎಂದು ಕರೆ ನೀಡಿದರು.

ಡಾ.ಆರ್.ಎಮ್. ಕುಬೇರಪ್ಪ, ಡಾ. ಐ.ಎ. ಪಿಂಜಾರ ಮಾತನಾಡಿ, ಅವರ ವೃತ್ತಿಯುದ್ದಕ್ಕೂ ತಮ್ಮ ಅನುಭವದ ಮೂಲಕ ಡಾ.ಶಾಬುದ್ದಿನ ಅವರು ಅನೇಕ ವಿದ್ಯಾರ್ಥಿಗಳು ಪ್ರತಿಭಾವಂತರಾಗಲು ಶ್ರಮಿಸಿದ್ದಾರೆ. ಅವರ ಅನುಭವದ ಸೇವೆಯಿಂದ ಸಾವಿರಾರು ವಿದ್ಯಾರ್ಥಿಗಳು ವಿವಿಧ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

> ವಿಧಾನ ಪರಿಷತ್ ಸದಸ್ಯ ಎಸ್.ಬಿ. ಸಂಕನೂರ ಮಾತನಾಡಿ, ಶಿಕ್ಷಣದ ನಿಜವಾದ ಗುರಿ ಚಾರಿತ್ರ್ಯ ನಿರ್ಮಾಣ. ಶಿಕ್ಷಣವೆಂದರೆ ಕೇವಲ ಪಠ್ಯ ಕಲಿಕೆಯಲ್ಲ. ಜೀವನದ ಮೌಲ್ಯಗಳ ಶಿಸ್ತು-ಸಂಸ್ಕಾರವನ್ನು ತುಂಬುವ ಕೆಲಸ ನಡೆದಾಗ ಮಾತ್ರ ಶಿಕ್ಷಣ ಪರಿಪೂರ್ಣವೆನಿಸುತ್ತದೆ. ವಿದ್ಯಾರ್ಥಿಗಳಿಗೆ ತಮ್ಮ ವೃತ್ತಿ ಜೀವನದುದ್ದಕ್ಕೂ ಜ್ಞಾನದಾಸೋಹ ಮಾಡಿರುವ ಡಾ. ಸಿದ್ನೆಕೊಪ್ಪರ ಹೃದಯಸ್ಪರ್ಶಿ ಕಾರ್ಯ ಎಂದೂ ಮರೆಯಲಾಗದು ಎಂದರು.

ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ.ಹನಮಂತಗೌಡ ಆರ್ ಕಲ್ಮನಿ ಪ್ರಸ್ತಾವಿಕವಾಗಿ ಮಾತನಾಡಿದರು. ಡಾ.ಎಸ್.ಎಫ್. ಸಿದ್ನೆಕೊಪ್ಪ ಅವರಿಗೆ ವಿವಿಧ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು, ವಿದ್ಯಾರ್ಥಿಗಳು, ಅತಿಥಿ ಉಪನ್ಯಾಸಕರು, ನಗರದ ವಿವಿಧ ಗಣ್ಯರಿಂದ ಸನ್ಮಾನ ಜರುಗಿತು. ನೂತನ ಕಾಲೇಜು ಸಮಿತಿಯವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಾದೇಶಿಕ ಜಂಟಿ ನಿದೇರ್ಶಕ ಪ್ರಕಾಶ ಹೊಸಮನಿ, ಪ್ರಾಚಾರ್ಯ ಕಲೀಲ ಅಹ್ಮದ ಚಿಕ್ಕೇರೂರ, ವಿದ್ಯಾದರ ದೊಡ್ಡಮನಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಾಬರ್ಜಿ, ಜಿಲ್ಲಾ ನೋಂದಣಾಧಿಕಾರಿ ಶಿವಕುಮಾರ ಅಪರಂಜಿ, ಅಸೂಟಿ, ಎಸ್. ಎನ್. ಬಳ್ಳಾರಿ, ಪ್ರಾಚಾರ್ಯರಾದ ಶಿವಪ್ಪ ಕುರಿ, ಎಮ್.ಯು. ಹಿರೇಮಠ, ಡಾ.ಅಪ್ಪಣ್ಣ ಹಂಜಿ, ಡಾ.ರಮೇಶ ಕಲ್ಲನಗೌಡರ, ಆರ್. ಎಚ್. ಏಕಬೋಟೆ, ಶಂಕರ ರಜಪೂತ, ಮಲ್ಲಿಕಾರ್ಜುನ ಐಲಿ, ಹೊನ್ನಪ್ಪ ಸಾಕಿ, ಡಾ.ದಿವಾಕರ ಪರಕಾಳೆ, ಶಿವಕುಮಾರ ಬೆಟಗೇರಿ, ಅಂಬರೀಷ ಚಾಗಿ, ವಿಜಯ ಕಬಾಡಿ, ಮಹಮ್ಮದ ಶಾಲಗಾರ, ಬಸವರಾಜ ಕಡೇಮನಿ, ಅಶೋಕ ಮಂದಾಲಿ, ಕುಸುಮಾ ಬೆಳಗಟ್ಟಿ ಉಪನ್ಯಾಸಕರು, ವಿದ್ಯಾರ್ಥಿಗಳು, ಸಿಬ್ಬಂದ್ದಿವರ್ಗದವರು ಇದ್ದರು.

ಮನೋರಮಾ ಕಾಲೇಜಿನ ಬಿಕಾಂ 5ನೇ ಸೆಮಿಸ್ಟರ್ ಪರೀಕ್ಷೆ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿಸಿಎ ಕೋರ್ಸಿನ 5ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಚೇತನ ಸಿದ್ದನಗೌಡರ (90.71) ಪ್ರಥಮ ಸ್ಥಾನದೊಂದಿಗೆ ಜಿಎಸ್‌ಟಿ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾನೆ. ಪವನ ಮುದಗಲ್ಲ (90.57) ದ್ವಿತೀಯ ಹಾಗೂ ಕಾಸ್ಟ್ ಅಕೌಂಟ್ ವಿಷಯದಲ್ಲಿ 100ಕ್ಕೆ 100 ಅಂಕ, ಶೃತಿ ಶೇಠ (89.28) ತೃತೀಯ ಸ್ಥಾನ ಹಾಗೂ ಜಿಎಸ್‌ಟಿ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾಳೆ.

ಸುಷ್ಮಾ ಓಸೇಕರ (88.85) ಅಂಕ ಪಡೆದು ನಾಲ್ಕನೇಯ ಸ್ಥಾನ, ಚೆನ್ನಮ್ಮಾ ಹಿರೇಮಠ (87.42) 5ನೇ ಸ್ಥಾನ ಪಡೆದಿದ್ದಾರೆ. ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಹ ಸಂಯೋಜಕರಾದ ಪ್ರೊ. ಅಲ್ವಿನಾ ಡಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

ಹಾವೇರಿ-ಗದಗ ಲೋಕಸಭೆ ಕ್ಷೇತ್ರದ ವ್ಯಾಪ್ತಿಗೆ ಬರುವ ಹೊಸ ಡಂಬಳ ಗ್ರಾಮದ 7 ದಲಿತ ಕುಟುಂಬಕ್ಕೆ ವಾಸದ ಮನೆಯಿಲ್ಲ. ಈ 7 ದಲಿತ ಬಡ ಕುಟುಂಬಗಳಿಗೆ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಮನೆ ಮಂಜೂರು ಮಾಡಿಕೊಡಬೇಕೆಂದು ಸಂಸದ ಬಸವರಾಜ ಬೊಮ್ಮಾಯಿಯವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ನಿರ್ಮಲಾ ಎಂ.ಹರಿಜನ, ರೇಣವ್ವ ಎಲ್.ಶಿರುಂದ, ಹಾಲವ್ವ ಮಾದರ, ಹುಲಗೆವ್ವ ಯ. ಮೇಲಿನಮನಿ, ಫಕೀರವ್ವ ಒಳಗುಂದಿ, ಹನುಮವ್ವ ಹರಿಜನ, ರೇಣುಕಾ ಪಿ.ಮಾದರ ಮುಂತಾದವರು ಹಾಜರಿದ್ದರು.

ಡೆಂಗ್ಯೂ ನಿಯಂತ್ರಣ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸಮೀಪದ ಕುರ್ತಕೊಟಿ ಪ್ರಾರ್ಥಮಿಕ ಆರೋಗ್ಯ ಕೇಂದ್ರದಿಂದ ಮನೆ ಮನೆಗೆ ತೆರಳಿ ಲಾರ್ವಾಹಾರಿ ಗಪ್ಪು ಗ್ಯಾಬೋಸಿಯ ಮೀನುಗಳನ್ನು ಸಿಮೆಂಟ್ ತೊಟ್ಟಿಗಳು, ಕಲ್ಲುಬಾವಿ ಬಿಡುವ ಮೂಲಕ ಡೆಂಗ್ಯೂ ನಿಯಂತ್ರಣಕ್ಕಾಗಿ ಸಾರ್ವಜನಿಕರಲ್ಲಿ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಆರೋಗ್ಯ ನಿರೀಕ್ಷಕ ಮೈಲಾರಲಿಂಗ, ಸಾರ್ವಜನಿಕರು ಸುತ್ತ ಮುತ್ತಲಿನ ಪರಿಸರವನ್ನು ಸ್ವಚ್ಛತೆಯಿಂದ ಇಟ್ಟುಕೊಳ್ಳಬೇಕು. ಜ್ವರ ಕಂಡುಬಂದಲ್ಲಿ ತಕ್ಷಣ ಸಮೀಪದ ಸರಕಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮೈಲಾರಲಿಂಗ ಬಿಳಿಯಲಿ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಸಾವಕ್ಕ ಮಾದಪ್ಪನವರ, ಭಾರತಿ ಇಳಿಗೇರ, ರೇಣುಕಾ ಲಕ್ಷ್ಮೇಶ್ವರ, ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರು ಇದ್ದರು.

ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆ

ಜುಲೈ 9ರಿಂದ 11ರವರೆಗೆ ವಿಶೇಷ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಹರಿಹರ

ನಗರದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮ ಜಾಗೃತಿ ಸಮಾರಂಭ ಜುಲೈ 9ರಿಂದ 11ರವರೆಗೆ ಸಂಜೆ 6 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಹಳೇಪೇಟೆ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಜರುಗುವುದು.

ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗಲಿರುವ ಧರ್ಮ ಜಾಗೃತಿ ಸಮಾರಂಭವನ್ನು ಜು. 9ರಂದು ಶಾಸಕ ಬಿ.ಪಿ. ಹರೀಶ್ ಉದ್ಘಾಟಿಸುವರು. ಮಳಲಿ ಸಂಸ್ಥಾನಮಠದ ಡಾ.ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಬಿಜೆಪಿ ಮುಖಂಡರಾದ ಗಾಯತ್ರಿ ಸಿದ್ಧೇಶ್ವರ, ಮಾಜಿ ಶಾಸಕ ಹೆಚ್. ಎಸ್. ಶಿವಶಂಕರ್, ಜುಂಜಪ್ಪ ಹೆಗ್ಗಪ್ಪನವರ, ಕೆ.ಎಮ್. ಸುರೇಶ್, ಚಿದಾನಂದಪ್ಪ, ಚಂದ್ರಶೇಖರ ಪೂಜಾರ್ ಭಾಗವಹಿಸುವರು.

ಸಮಾರಂಭದಲ್ಲಿ ಎಸ್.ಎಸ್. ಎಲ್.ಸಿ. ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ಹರಿಹರದ ವಿದ್ಯಾರ್ಥಿಗಳಿಗೆ, ವಿಶೇಷ ಸಾಧನೆ ಮಾಡಿದ ಸಾಧಕರಿಗೆ ಶ್ರೀ ರಂಭಾಪುರಿ ಜಗದ್ಗುರುಗಳಿಂದ ವಿಶೇಷ ಗುರುರಕ್ಷೆ ನಡೆಯುವುದು.

ಸುಲಫಲ್ ದೇವರಮಠದ ಗಜಾಪುರದ ಪಂಚಾಕ್ಷರಯ್ಯನವರು ಮತ್ತು ಮಕ್ಕಳು, ದಾವಣಗೆರೆಯ ಡಾ.ಸವಿತಾ, ಡಾ.ಮಹೇಶ್ ಮತ್ತು ಕುಟುಂಬ ವರ್ಗ, ಹಳೇಹರಲಾಪುರದ ಪಟೇಲ್ ಹಾಲಪ್ಪಗೌಡರು ಮತ್ತು ಕುಟುಂಬ ವರ್ಗ, ಪಟೇಲ್ ಬಸವರಾಜಪ್ಪಗೌಡರು ಮತ್ತು ಕುಟುಂಬ ವರ್ಗದವರು ಪ್ರಸಾದ ಸೇವೆಯನ್ನು ನಿರ್ವಹಿಸುವರು.

> ಜು. 10ರ ಸಮಾರಂಭದ ನೇತೃತ್ವವನ್ನು ಹರಪನಹಳ್ಳಿ ತೆಗ್ಗಿನ ಸಂಸ್ಥಾನ ಮಠದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ವಹಿಸುವರು. ಸಂಸದೆ ಪ್ರಭಾ ಮಲ್ಲಿಕಾರ್ಜುನ, ಶಾಸಕಿ ಲತಾ ಮಲ್ಲಿಕಾರ್ಜುನ, ಡಿ.ಜಿ. ಶಿವಾನಂದಪ್ಪ, ಬಿ.ಎಮ್. ವಾಗೀಶಸ್ವಾಮಿ, ಶಶಿಕುಮಾರ ಮೆಹರವಾಡೆ, ಬಿ.ಹಾಲೇಶಗೌಡ, ಕೊಂಡಜ್ಜಿ ಈಶ್ವರಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಜುಲೈ 9ರಿಂದ 11ರವರೆಗೆ ಬೆಳಿಗ್ಗೆ 8.30 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರಿಂದ ಲೋಕ ಕಲ್ಯಾಣಾರ್ಥ ಇಷ್ಟಲಿಂಗ ಮಹಾಪೂಜೆ ನಡೆಯಲಿದೆ. ಪ್ರತಿದಿನ ಪ್ರಾತಃಕಾಲ ಶ್ರೀ ಜಗದ್ಗುರು ರೇಣುಕಾಚಾರ್ಯರ ಮಂಗಲ ಮೂರ್ತಿಗೆ, ಶ್ರೀ ಬಸವೇಶ್ವರ ಮಂಗಲ ಮೂರ್ತಿಗೆ ಮಹಾರುದ್ರಾಭಿಷೇಕ, ಅಷ್ಟೋತ್ತರ ಸಹಸ್ರ ಬಿಲ್ವಾರ್ಚನೆ, ಅಲಂಕಾರ ಪೂಜೆ, ಮಹಾಮಂಗಳಾರತಿ, ತೀರ್ಥ-ಪ್ರಸಾದ ವಿನಿಯೋಗ ನಡೆಯುವುದು.

ಈ ಎಲ್ಲ ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಪಾಲ್ಗೊಳ್ಳಬೇಕೆಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಹಳೇಪೇಟೆ ಶ್ರೀ ಬಸವೇಶ್ವರ ದೇವಸ್ಥಾನ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ವಿನಂತಿಸಿದ್ದಾರೆ.

ಮೊಹರಂ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣವು ಸದಾ ಸೌಹಾರ್ದತೆಯಿಂದ ಸಾಗಿ ಬಂದು ಈ ಭಾಗದಲ್ಲಿಯೇ ಭಾವೈಕ್ಯತೆಯ ನಗರವಾಗಿದೆ. ಹಿಂದೂ-ಮುಸ್ಲಿಂ ಬಾಂಧವರು ಒಟ್ಟಾಗಿ ಆಚರಿಸುವ ಮೊಹರಂ ಹಬ್ಬವನ್ನು ಎಂದಿನಂತೆ ಶಾಂತಿಯುತವಾಗಿ ಆಚರಿಸಿ ಎಂದು ಪಿಎಸ್‌ಐ ಈರಪ್ಪ ರಿತ್ತಿ ಹೇಳಿದರು.

ಅವರು ರವಿವಾರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮೊಹರಂ ಹಬ್ಬದ ಪ್ರಯುಕ್ತ ಕರೆದಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದರು.

ಇಲ್ಲಿ ಜಾತಿ, ಮತವೆನ್ನದೇ ಒಗ್ಗಟ್ಟಾಗಿ ಹಬ್ಬ ಆಚರಿಸಿಕೊಂಡು ಬರಲಾಗುತ್ತಿದೆ. ಅದರಂತೆ ಪಟ್ಟಣದ ಜನ ಶಾಂತಿ, ಸೌಹಾರ್ತತೆಗೆ ವಿಶೇಷವಾದ ಒತ್ತು ನೀಡುತ್ತಿರುವುದು ಶ್ಲಾಘನೀಯ. ಪೊಲೀಸ್ ಇಲಾಖೆಯೊಂದಿಗೆ ಅತ್ಯುತ್ತಮವಾದ ಸಂಬಂಧವನ್ನು ಇಲ್ಲಿನ ಜನತೆ ಇಟ್ಟುಕೊಂಡಿದ್ದಾರೆ. ಮುಂಬರುವ ಮೊಹರಂ ಹಬ್ಬವನ್ನು ಅತ್ಯಂತ ಶಿಸ್ತು, ಶಾಂತಿ, ಸೌಹಾರ್ದತೆಯಿಂದ ಆಚರಿಸಬೇಕು. ಪಟ್ಟಣದದಲ್ಲಿ ಶಾಂತಿ ಕಾಪಾಡಲು ಇಲಾಖೆಯೊಂದಿಗೆ ಕೈ ಜೋಡಿಸಬೇಕು ಎಂದರು.

ಸಭೆಯಲ್ಲಿ ಪಟ್ಟಣದ ಪ್ರಮುಖರಾದ ಮಹೇಶ ಹೊಗೆಸೊಪ್ಪಿನ, ಪೂರ್ಣಾಜಿ ಖಿರಾಟೆ, ಸುರೇಶ ನಂದೆಣ್ಣವರ, ಅಂಜುಮನ್ ಕಮೀಟಿ ಅಧ್ಯಕ್ಷ ಎಂ.ಎಂ.ಗದಗ ಸೇರಿದಂತೆ ಅನೇಕರು ಮಾತನಾಡಿದರು.

ಈ ಸಂದರ್ಭದಲ್ಲಿ ಅಪರಾಧ ವಿಭಾಗದ ಪಿಎಸ್‌ಐ ವಿ.ಜಿ. ಪವಾರ, ದೂದ ನಾನಾ ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನ ಸಾಬ್ ಕಣಕೆ, ದಾದಾಪಿರ ಕಾರಡಗಿ, ಅನಿಲ ಮುಳಗುಂದ, ಮಾಬುಸಾಬ್ ಮುಳುಗುಂದ, ವೀರಭದ್ರಪ್ಪ ಅರಿಶಿಣದ, ಗಂಗಾಧರ ಸೂರಣಗಿ, ಬಸವರಾಜ ಕಲ್ಲೂರ, ಶಿವಾನಂದ ಲಿಂಗಶೆಟ್ಟಿ, ಜಿಲಾನಿ ಶಿದ್ದಿ, ರಮೇಶ ಹಂಗನಕಟ್ಟಿ, ಜಹಿರಅಹ್ಮದ ಸಿದ್ದಾಪುರ, ನೂರಅಹ್ಮದ ನಿಡಗುಂದಿ, ನೂರಅಹ್ಮದ ಮಕಾನದಾರ, ಮಹಮ್ಮದರಫೀಕ ಸಿದ್ದಾಪುರ, ಯಾಕೂಬ ಕಾರಡಗಿ, ಸಾದಿಕ ಸಮಲೆವಾಲೆ ಸೇರಿದಂತೆ ಹಿಂದೂ-ಮುಸ್ಲಿಂ ಬಾಂಧವರು ಇದ್ದರು.

ನೀರು ವಿತರಣಾ ಕಾಮಗಾರಿಗೆ ಶಾಸಕ ಜಿ.ಎಸ್. ಪಾಟೀಲ ಚಾಲನೆ

ನರೇಗಲ್ ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ

■ ವಿಜಯಸಾಕ್ಷಿ ಸುದ್ದಿ, ನರೇಗಲ್

15 ಕೋಟಿ ರೂ ಯೋಜನೆಯ ಈ ಕಾರ್ಯದಿಂದ ಎಲ್ಲರಿಗೂ ಶುದ್ಧ ಕುಡಿಯುವ ನೀರು ಲಭ್ಯವಾಗಲಿದೆ. ಇದರ ಸದುಪಯೋಗವನ್ನು ಪಟ್ಟಣ ಮತ್ತು ಮಜಿರೆ ಗ್ರಾಮಗಳ ಎಲ್ಲ ನಾಗರಿಕರೂ ಪಡೆದುಕೊಳ್ಳಬೇಕೆಂದು ರೋಣ ಶಾಸಕ, ಖನಿಜ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಪ.ಪಂ ಹತ್ತಿರ ಭಾನುವಾರ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ ಹಾಗೂ ಪಟ್ಟಣ ಪಂಚಾಯತಿ ನರೇಗಲ್ಲ ಇವರ ಸಹಯೋಗದಲ್ಲಿ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನಯಡಿ ಅಂದಾಜು 1551 ಲಕ್ಷ ರೂಗಳ ವೆಚ್ಚದಲ್ಲಿ ಕುಡಿಯುವ ನೀರು ವಿತರಣಾ ಜಾಲವನ್ನು ಅಳವಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ ದೇಶದೆಲ್ಲೆಡೆ ಈಗಾಗಲೇ ಅಮೃತ 2.0 ಯೋಜನೆಯಡಿಯಲ್ಲಿ ಕುಡಿಯುವ ನೀರು ವಿತರಣಾ ಜಾಲವನ್ನು ಅಳವಡಿಸುವ ಕಾರ್ಯದ ಮೊದಲ ಹಂತವು ಸಂಪೂರ್ಣವಾಗಿ ಯಶಸ್ವಿಯಾಗಿದ್ದು, ಪ್ರಸ್ತುತ 2ನೇ ಹಂತದ ಕಾಮಗಾರಿಗಳಿಗೆ ಕ್ಷೇತ್ರದಲ್ಲಿ ಚಾಲನೆ ನೀಡಲಾಗುತ್ತಿದೆ. ನರೇಗಲ್ ಪಟ್ಟಣ ಮಜರೆ ಗ್ರಾಮಗಳ ಜನರ ಸಂಪೂರ್ಣ ಸಹಕಾರ ಪಡೆದುಕೊಂಡು ಗುತ್ತಿಗೆದಾರರು ಪಟ್ಟಣದ ಪ್ರತಿಯೊಂದು ಮನೆಗಳಿಗೆ ನೀರು ಪೂರೈಕೆ ಮಾಡಲು ಮುಂದಾಗಬೇಕಿದೆ ಎಂದರು.

ಗುತ್ತಿಗೆದಾರರು ಯಾವುದೇ ಫಲಾಪೇಕ್ಷೆ ಇಲ್ಲದೆ ಗುಣಮಟ್ಟದ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಮುಂದಾಗಬೇಕು ಎಂದು ಇಲಾಖೆ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಶಾಸಕರು ಖಡಕ್ ಎಚ್ಚರಿಕೆಯನ್ನು ನೀಡಿದರು.

ನರೇಗಲ್ ಪಟ್ಟಣ ಅಭಿವೃದ್ಧಿಗೆ ಈಗಾ